# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 221 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 20–03–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 221 | Title- Code: KARKAN 28269 | Chitradurga | Date: 20-03-2024 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಅಭಿವೃದ್ಧಿ ಬಗ್ಗೆ ಹೆಚ್ಚು ಚಿಂತನೆ ನಡೆಸಿ ಜಾಗೃತರಾಗಿ: ಶಾಸಕ ರಘುಮೂರ್ತಿ 2

ಪಟ್ಟಣದಲ್ಲಿ ಬ್ಯಾನರ್, ಬಂಟಿಂಗ್ಸ್ ತೆರವುಗೊಳಿಸಿದ ಹೊಸದುರ್ಗ ಪುರಸಭೆ 3

ನಾನೊಬ್ಬ ಸ್ಟ್ರಾಂಗ್ ಸಿಎಂ, ನಿಮ್ಮ ಹಾಗೆ ವೀಕ್ ಸಿಎಂ ಅಲ್ಲ: ಸಿದ್ದರಾಮಯ್ಯ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಮತ್ತೆ ಮೋದಿ ಪ್ರಧಾನಿ ಖಚಿತ: ಸೋಮಣ್ಣ



» ಚಿತ್ರದುರ್ಗ

ವಿಧಾನ ಸಭಾ ಚುನಾವಣೆ ಹಾಗೂ ಲೋಕಸಭಾ ಚುನಾವಣೆ ಎರಡು ಬೇರೆ. ಇಲ್ಲಿ ನಾವ್ಯಾರು ಮುಖ್ಯವಲ್ಲ, ದೇಶ ಮುಖ್ಯವಾಗುತ್ತದೆ ಎಂದು ಮಾಜಿ ಸಚಿವ, ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ತಿಳಿಸಿದರು.

ನಗರದಲ್ಲಿ ಮಂಗಳವಾರ ಮಾಧ್ಯಮ ಗಳೊಂದಿಗೆ ಮಾತಾಡಿದ ಅವರು, ಈ ಚುನಾವಣೆಯಲ್ಲಿ ನರೇಂದ್ರ ಮೋದಿ ಮುಖ್ಯ. ಭಾರತವನ್ನು ಮತ್ತೊಮ್ಮೆ ವಿಕಸಿತದ ಕಡೆಗೆ ಕೊಂಡೊಯ್ಯಲು 142 ಕೋಟಿ ಜನ ಮೋದಿ ಪರ ಮತ ಚಲಾಯಿಸುತ್ತಾರೆ. ಅರ್ಥ ಮಾಡಿಕೊಂಡು ನಾವು ಹೆಜ್ಜೆ ಇಡುವುದು ಒಳ್ಳೆಯದು ಎಂದು ಹೇಳಿದರು.

ನಾನು ಏಳು ಬಾರಿ ಶಾಸಕನಾಗಿ, ವಿಧಾನ ಪರಿಷತ್ ಸದಸ್ಯನಾಗಿ ಮಂತ್ರಿಯಾಗಿ ಕೆಲಸ ಮಾಡಿದ್ದೇನೆ. ಒಂದು ದೇಶವನ್ನು ಹೇಗೆ ಆಡಳಿತ ಮಾಡಬೇಕು ಎಂದು ತೋರಿಸಿದ ಮೋದಿಯವರನ್ನು ಇಡೀ ವಿಶ್ವವೇ ಮೆಚ್ಚಿದೆ. ಕರ್ನಾಟಕದ ಜನರು ಮೆಚ್ಚಿದ್ದು, ಮೂರನೇ ಬಾರಿ ಮೋದಿ ಪ್ರಧಾನಿಯಾಗಲು ಎಲ್ಲರೂ ಅವಕಾಶ ನೀಡುತ್ತಾರೆ ಎಂಬುದು ನನ್ನ ಅಚಲ ವಿಶ್ವಾವಾಗಿದೆ ಎಂದರು.

ಟಿಕೆಟ್ ವಂಚಿತರು ಯಾವ ಪಕ್ಷದ ಕಡೆ ಮುಖ ಮಾಡಲಿ ಅದು ಗೌಣ, ಇದು ದೇಶದ ಪ್ರಶ್ನೆ, ಟಿಕೆಟ್ ಕೊಡುವಾಗ 28 ಸ್ಥಾನಗಳಿಗೆ 29 ಕೊಡಲು ಸಾಧ್ಯವಿಲ್ಲ, ಅದನ್ನು ಹೇಗೆ ಕೊಡಬೇಕು ಎಂದು ಹೈ ಕಮಾಂಡ್ ತೀರ್ಮಾನ ಮಾಡುತ್ತದೆ.



ನಾನು ತುಮಕೂರಿಗೆ ಬರಲು ಕಾರಣವಿದೆ. ನನಗೂ ತುಮಕೂರಿಗೂ ಅವಿನಾಭಾವ ಸಂಬಂಧವಿದೆ. ನಾನು ಅನೇಕ ಬಾರಿ ತುಮಕೂರಿನ ಬಗ್ಗೆ ಬೆಳಕನ್ನು ಚೆಲ್ಲಿದ್ದೇನೆ. ನಾನು ಮೂರು ಬಾರಿ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವನಾಗಿದ್ದೆ, ಶ್ರೀ ಕ್ಷೇತ್ರ ವಿಶ್ವದ ಮಟ್ಟಕ್ಕೆ ತಲುಪಲು ನನ್ನ ಅಳಿಲು ಸೇವೆ ಇದೆ. ಇದೆಲ್ಲವನ್ನು ಮನಗಂಡು ವರಿಷ್ಠರು ಟಿಕೆಟ್ ಕೊಟ್ಟಿದ್ದಾರೆ ಎಂದು ತಿಳಿಸಿದರು.ನಾನು ಮೊದಲು ಹೇಳಿದ್ದೇ ಈಗಲೂ ಹೇಳುತ್ತಿದ್ದೇನೆ. ಬೇರೆ ಯಾರಿಗೆ ಟಿಕೆಟ್ ನೀಡಿದರೂ ನಾನು ಕೆಲಸ ಮಾಡುತ್ತೇನೆ. ಪಕ್ಷ ಎಲ್ಲವನ್ನು ಕೊಟ್ಟಿದೆ. ಅದನ್ನು ಮನಗಂಡು ದೇಶಕ್ಕಾಗಿ ಎಲ್ಲವನ್ನು ಬಿಟ್ಟು ಕೆಲಸ ಮಾಡಬೇಕಿದೆ.ಮಾಧುಸ್ವಾಮಿ ಅವರನ್ನು ಭೇಟಿ ಮಾಡಲು ಬರುತ್ತೇನೆಂದು ಕೇಳಿದೆ ಬರಬೇಡ ಎಂದಿದ್ದಾರೆ. ಮತ್ತೊಮ್ಮೆ ಕೇಳುತ್ತೇನೆ. ಬಾ ಅಂದರೆ ಹೋಗುತ್ತೇನೆ. ನನ್ನಂತ ಹಿರಿಯ ಇನ್ನೇನು ಮಾಡಲು ಸಾಧ್ಯ, ಮಾಧುಸ್ವಾಮಿಗೆ ಟಿಕೆಟ್ ಕೊಟ್ಟಿದ್ದರೂ ಕೂಡ ಸೊಮಣ್ಣ ಬೇಕಿತ್ತು. ಬಸವರಾಜ್‌ಗೆ ಟಿಕೆಟ್ ಕೊಟ್ಟಾಗ ಹೇಗೆ ಕೆಲಸ ಮಾಡಿದ್ದೇನೆಂದು ಜಿಲ್ಲೆಯ ಜನರಿಗೆ ಗೊತ್ತಿದೆ. ಆದ್ದರಿಂದ ಮಾಧುಸ್ವಾಮಿ ಅವರು ಬುದ್ಧಿವಂತರು ಪ್ರಜ್ಞಾನವಂತರು, ಕಾನೂನು ಮತ್ತು ಸಣ್ಣ ನೀರಾವರಿ ಸಚಿವರಾಗಿದ್ದವರು, ಅವರ ತೀರ್ಮಾನ ಏನು ಎಂದು ಗೊತ್ತಿಲ್ಲ, ನಾನು ಮತ್ತೆ ತೀರ್ಮಾನ ಮಾಡುತ್ತೇನೆ ಎಂದರು.ಈಶ್ವರಪ್ಪ ನುರಿತ ರಾಜಕಾರಣಿ ಅವರೇನು ಹೇಳಿದ್ದಾರೆ, ನನಗೆ ಗೊತ್ತಿಲ್ಲ. ಅವರಿಗೆ ನೋವಾಗಿದೆ.2–3 ದಿನಗಳಲ್ಲಿ ಸರಿಯಾಗುತ್ತದೆ. ಈಶ್ವರಪ್ಪ ನಮ್ಮ ಬೆನ್ನೆಲುಬು ಅವರಿಗಾಗಿರುವ ನೋವನ್ನು ಶಮನ ಮಾಡಲು ಕೇಂದ್ರದ ನಾಯಕರು ತೀರ್ಮಾನ ಮಾಡುತ್ತಿದ್ದಾರೆ ಎಂದರು. ಮಾಜಿ ಶಾಸಕ ತಿಪ್ಪಾರೆಡ್ಡಿ ಇದ್ದರು.



## ಸೋಮಣ್ಣರಿಂದ ವಿವಿಧ ಮಠಾಧೀಶರ ಭೇಟಿ

ತುಮಕೂರು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ, ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಹಾಗೂ ಕರ್ನಾಟಕ ಸರ್ಕಾರದ ಕುವೆಂಪು ಭಾಷಾ ಪ್ರಾಧಿಕಾರದ ಸದಸ್ಯರಾಗಿ ಆಯ್ಕೆಯಾದ ಕರಿಯಪ್ಪ ಮಾಳಿಗೆ ಚಿತ್ರದುರ್ಗ ಭೋವಿಗುರುಪೀಠಕ್ಕೆ ಆಗಮಿಸಿ ಶ್ರೀಗಳಿಂದ ಆರ್ಶಿವಾದ ಪಡೆದರು. ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ, ಕನಕ ಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ, ಯಾದವ ಗುರುಪೀಠದ ಶ್ರೀ ಶ್ರೀಕೃಷ್ಣ ಯಾದವಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ, ಹಡಪದ ಗುರುಪೀಠದ ಶ್ರೀ ಅನ್ನದಾನಿ ಭಾರತೀ ಅಪ್ಪಣ್ಣ ಸ್ವಾಮೀಜಿ, ಕೊರಟಗೆರೆಯ ಶ್ರೀ ಕಾಶಿ ಅನ್ನಪೂರ್ಣೇಶ್ವರಿ ಮಠದ ಶ್ರೀ ಮಹಾಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಅನಿತ್‌ಕುಮಾರ್, ಅಶ್ವಿನಿ ಶ್ರೀನಿವಾಸ, ಭಾಜಪ ಜಿಲ್ಲಾಧ್ಯಕ್ಷ ಹನುಮಂತೇಗೌಡ, ತುಮಕೂರು ಜಿಲ್ಲಾ ಭೋವಿ ಸಂಘದ ಅಧ್ಯಕ್ಷ ಓಂಕಾರ ಇದ್ದರು.

# ಕೌಟುಂಬಿಕ ಸಮಸ್ಯೆ: ಮನೆಯ ಕಣದ ಬೇಲಿಗೆ ಬೆಂಕಿ ಹಾಕಿ ಮಕ್ಕಳೊಂದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ತಾಯಿ

» ಚಳ್ಳಕೆರೆ

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ದೇವರೆಡ್ಡಿಹಳ್ಳಿ ಪಂಚಾಯಿತಿ ವ್ಯಾಪ್ತಿಯ ಮಲ್ಲಸಮುದ್ರ ಗ್ರಾಮದಲ್ಲಿ ಮಂಗಳವಾರ ಮಧ್ಯಾಹ್ನ ಬೇಲಿಗೆ ಬೆಂಕಿಬಿದ್ದು ಇಬ್ಬರು ಮಕ್ಕಳು, ತಾಯಿ ಸಜೀವ ದಹನವಾದ ಘಟನೆ ನಡೆದಿದೆ. ಈ ಬಗ್ಗೆ ಸುದ್ದಿ ತಿಳಿದ ಪೊಲೀಸರು ಸ್ಥಳಕ್ಕೆ ದಾವಿಸಿ ನೋಡುವಷ್ಟರಲ್ಲಿ ಇಬ್ಬರು ಮಕ್ಕಳು ಮೃತಪಟ್ಟಿ, ಮಹಿಳೆಯ ಸ್ಥಿತಿ ಚಿಂತಾಜನಕವಾಗಿತ್ತು. ಆಕೆಯನ್ನು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯದಲ್ಲಿ ಆಕೆಯೂ ಮೃತಪಟ್ಟಿರುತ್ತಾಳೆ.

ಗ್ರಾಮದ ಲಾರಿಚಾಲಕ ತಿಪ್ಪೇಸ್ವಾಮಿಯ ಪತ್ನಿ ತಲಾರಿಮಾರಕ್ಕ(24) ಆಕೆಯ ಮಕ್ಕಳಾದ ಟಿ.ನಯನ್(4), ಹರ್ಷವರ್ಧನ್(2) ಮೃತಪಟ್ಟವರಾಗಿದ್ದು, ಮನೆಯ ಪಕ್ಕದ ಕಣದ ಬೇಲಿಗೆ ಬೆಂಕಿ ಹೊತ್ತಿಕೊಂಡ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದೆ.


ಪುಟ ↘ 2




ಚಳ್ಳಕೆರೆ ತಾಲ್ಲೂಕಿನ ಮಲ್ಲಸಮುದ್ರ ಗ್ರಾಮದಲ್ಲಿ ಮಂಗಳವಾರ ಮಧ್ಯಾಹ್ನ ತಾಯಿ, ಇಬ್ಬರು ಮಕ್ಕಳು ಸಾವನಪ್ಪಿದ ಸ್ಥಳಕ್ಕೆ ಡಿವೈಎಸ್ಪಿ ಟಿ.ಬಿ.ರಾಜಣ್ಣ

## ಫಾಸ್ಟ್ ನ್ಯೂಸ್

### ಜಿಲ್ಲಾ ಕ್ರೀಡಾಂಗಣದಲ್ಲಿ ಯಾವುದೇ ಶಿಬಿರ ಆಯೋಜನೆ ಇಲ್ಲ

» ಚಿತ್ರದುರ್ಗ

2023–24ನೇ ಸಾಲಿಗೆ ಬೇಸಿಗೆ ರಜೆ ಪ್ರಯುಕ್ತ ಚಿತ್ರದುರ್ಗ ಜಿಲ್ಲಾ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಚುನಾವಣಾ ನೀತಿ ಸಂಹಿತೆ ಪ್ರಯುಕ್ತ ಯಾವುದೇ ಶಿಬಿರವನ್ನು ಆಯೋಜಿಸಿರುವುದಿಲ್ಲ. ಜಿಲ್ಲಾ ಕ್ರೀಡಾಂಗಣದಲ್ಲಿ ಇಲಾಖೆಯಿಂದ ಅಥ್ಲೆಟಿಕ್ ಹಾಗೂ ವಾಲಿಬಾಲ್ ತರಬೇತುದಾರರಿದ್ದು, ಕ್ರೀಡಾಪಟುಗಳು ಉಚಿತವಾಗಿ ತರಬೇತಿ ಪಡೆಯಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಬ್ ಇನ್ಸ್‌ಪೆಕ್ಟರ್ ಹುದ್ದೆಗೆ ಅರ್ಜಿ

» ಚಿತ್ರದುರ್ಗ

ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗದವರು ದೆಹಲಿ ಪೋಲಿಸ್ ಮತ್ತು ಕೇಂದ್ರ ಸಶಸ್ತ್ರ ಪೋಲಿಸ್ ಪಡೆಗಳ (ಸಿಎಪಿಎಫ್)ಗಳಲ್ಲಿ ಸಬ್ ಇನ್ಸ್‌ಪೆಕ್ಟರ್ (ಎಸ್‌ಐ) ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 29 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ಪಡೆದಿರಬೇಕು. 20 ರಿಂದ 25 ವರ್ಷ ವಯೋಮಿತಿ ಹೊಂದಿರಬೇಕು. ಎಸ್‌ಸಿ, ಎಸ್‌ಟಿ, ಒಬಿಸಿ, ಇಎಸ್‌ಎಂ ಇತರ ನಿರ್ದಿಷ್ಟ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗದ ವೆಬ್‌ಸೈಟ್ ತಿತಿತಿ.ಥಿಇಇಡಿ.ಇಚಿಡಿ.ಟಿಥಿ.ಿಟಿ / ಠಣಣಠಿ://ಥಿ.ಟಿಥಿ.ಿಟಿ ತಂತ್ರಾಂಶಕ್ಕೆ ಬೇಟಿ ನೀಡಬಹುದು ಅಥವಾ ಸಿಬ್ಬಂದಿ ಆಯೋಗದ ದೂರವಾಣಿ ಸಂಖ್ಯೆ 080–25502520 ಹಾಗೂ ಜಿಲ್ಲಾ ಉದ್ಯೋಗ ವಿಮಯ ಕಚೇರಿ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಳಲ್ಕೆರೆ: ಎಫ್‌ಎಸ್‌ಟಿ, ವಿಎಸ್‌ಟಿ, ವಿವಿಟಿ ಹಾಗೂ ವಿಡಿಯೋ ಗ್ರಾಫರ್ ಸಭೆ



» ಚಿತ್ರದುರ್ಗ

ಹೊಳಲ್ಕೆರೆ ತಹಶೀಲ್ದಾರ್ ಕಚೇರಿಯಲ್ಲಿ ಮಂಗಳವಾರ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಹಾಯಕ ಚುನಾವಣಾಧಿಕಾರಿ ವಿವೇಕಾನಂದ ಅಧ್ಯಕ್ಷತೆಯಲ್ಲಿ ಎಫ್‌ಎಸ್‌ಟಿ, ವಿಎಸ್‌ಟಿ, ವಿವಿಟಿ ಹಾಗೂ ವಿಡಿಯೋ ಗ್ರಾಫರ್‌ಗಳಿಗೆ ಸಭೆ ಮಾಡಲಾಯಿತು. ಈ ಸಂದರ್ಭದಲ್ಲಿ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ ಚುನಾವಣಾ ಸಿಬ್ಬಂದಿ ಹಾಜರಿದ್ದರು.

**ಪ್ರಮುಖ ಸುದ್ದಿ**

# ಮತಗಟ್ಟೆ, ಚೆಕ್‌ಪೋಸ್ಟ್ ಪರಿಶೀಲಿಸಿದ ಡಿಸಿ ಟಿ.ವೆಂಕಟೇಶ್

» ಚಿತ್ರದುರ್ಗ

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರು ಚಿತ್ರದುರ್ಗ ನಗರದ ವಿವಿಧ ಮತಗಟ್ಟೆ ಹಾಗೂ ಚೆಕ್‌ಪೋಸ್ಟ್‌ಗಳಿಗೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಚುನಾವಣಾ ಆಯೋಗದ ನಿರ್ದೇಶನದಂತೆ ಮತಗಟ್ಟೆಗಳು ಮತದಾರ ಸ್ನೇಹಿಯಾಗಿರಬೇಕು. ಬೇಸಿಗೆ ಹಿನ್ನಲೆಯಲ್ಲಿ ಮತಗಟ್ಟೆಯಲ್ಲಿ ಅಗತ್ಯ ನೆರಳಿನ ವ್ಯವಸ್ಥೆ ಮಾಡಬೇಕು. ಕುಡಿಯುವ ನೀರು, ವಿದ್ಯುತ್, ಶೌಚಾಲಯಗಳು ಇರಬೇಕು. ವಿಕಲಚೇತನರು ಹಾಗೂ ವಯಸ್ಸಾದ ಮತದಾರರನ್ನು ವ್ಹೀಲ್‌ಚೇರ್ ಮೂಲಕ ಮತಗಟ್ಟೆಗೆ ಕೊಂಡೊಯ್ಯಲು ಅನುಕೂಲವಾಗುವಂತೆ ರ್ಯಾಂಪ್ ಸೌಲಭ್ಯ ಕಲ್ಪಿಸಬೇಕು. ತಾಯಂದಿರು ಮಕ್ಕಳಿಗೆ ಎದೆ ಹಾಲುಣಿಸಲು ಪ್ರತ್ಯೇಕ ಕೋಣೆ ಕಾಯ್ದಿರಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.ಚಿತ್ರದುರ್ಗ ತಾಲ್ಲೂಕು ಕ್ಯಾದಿಗೆರೆ ಹಾಗೂ ನಗರದ ಆರ್.ಟಿ.ಓ ಕಚೇರಿ ಮುಂಭಾಗದ ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿ ಕಾರ್ಯವೈಖರಿ ಪರಿಶೀಲಿಸಿದರು.ನಗರದ ಜೋಗಿಮಟ್ಟಿ ರಸ್ತೆಯ ಕರುವಿಕಟ್ಟೆ ಹಿರಿಯ ಪ್ರಾಥಮಿಕ ಶಾಲೆಯ ಮತಗಟ್ಟೆ ಪರಿಶೀಲನೆ ವೇಳೆ, ಶಾಲೆಯಲ್ಲಿ ಸರಿಯಾದ ರೀತಿಯಲ್ಲಿ ಬಿಸಿಯೂಟದ ದವಸ ಧಾನ್ಯಗಳ ನಿರ್ವಹಣೆ ಮಾಡದಿರುವುದು ಕಂಡುಬಂತು.ಈ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಸಂಬಂಧಪಟ್ಟ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಬಿಸಿಯೂಟಕ್ಕೆ ಬಳಸುವ ದವಸ ಧಾನ್ಯಗಳನ್ನು ಸರಿಯಾದ ಸ್ಥಳದಲ್ಲಿ ಶೇಖರಿಸಿಡಬೇಕು. ದಾಸ್ತಾನು ಸಂಗ್ರಹ ವಹಿಯನ್ನು ನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ಚಿತ್ರದುರ್ಗ ನಗರದ ಸಂತ ಜೋಸೆಫೆರ ಕಾನ್ವೆಂಟ್ ಶಾಲೆ, ಮಹಾರಾಣಿ ಕಾಲೇಜು, ಕಾಮನಬಾವಿ ಬಡಾವಾಣೆ, ವಿ.ಪಿ.ಬಡಾವಣೆ ಶಾಲೆಗಳ ಮತಗಟ್ಟೆಗಳನ್ನು ಜಿಲ್ಲಾಧಿಕಾರಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯಕ್ತೆ ಎಂ.ರೇಣುಕಾ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.





## ಫಾಸ್ಟ್ ನ್ಯೂಸ್

### ಕೌಟುಂಬಿಕ ಸಮಸ್ಯೆ: ಮನೆ ಕಣದ ಬೇಲಿಗೆ ಬೆಂಕಿ ಹಾಕಿ ಮಕ್ಕಳೊಂದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ತಾಯಿ



» ಮೊದಲ ಪುಟದಿಂದ



ಆದರೆ, ಈ ಬಗ್ಗೆ ಮಾರಕ್ಕನೇ ಕಣದ ಬೇಲಿಗೆ ಬೆಂಕಿ ಹಚ್ಚಿ ತನ್ನ ಇಬ್ಬರೂ ಮಕ್ಕಳನ್ನು ಬೆಂಕಿಗೆ ತಳ್ಳಿ ತಾನು ಸಹ ಬೆಂಕಿಯಲ್ಲಿ ಹಾರಿ ಆತ್ಮಹತ್ಯೆ ಮಾಡಿಕೊಂಡಿರುತ್ತಾಳೆ. ಕೌಟುಂಬಿಕ ಸಮಸ್ಯೆ ಇದಕ್ಕೆ ಕಾರಣ ಎನ್ನಲಾಗಿದೆ. ಮಾರಕ್ಕ ವಾಸವಿದ್ದ ಕೆಲವೇ ಅಡಿಗಳ ದೂರದಲ್ಲಿ ಈ ಘಟನೆ ನಡೆದಿದೆ. ಈ ಸಂದರ್ಭದಲ್ಲಿ ಪತಿ ಲಾರಿಚಾಲಕ ತಿಪ್ಪೇಸ್ವಾಮಿ ವಿಷಯ ತಿಳಿದು ಸ್ಥಳಕ್ಕೆ ದಾವಿಸಿ ಬಂದುನೋಡುವಷ್ಟರಲ್ಲಿ ಮೂವರು ಸುಟ್ಟಿದ್ದು ಕಂಡುಬಂದಿದೆ. ಉಪವಿಭಾಗದ ಡಿವೈಎಸ್ಪಿ ಟಿ.ಬಿ.ರಾಜಣ್ಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಳಕು ಪಿಎಸ್‌ಐ ಅಶ್ವಿನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಚಿತ್ರದುರ್ಗ ವಿಧಾನಸಭಾ ಕ್ಷೇತ್ರ: ಸಹಾಯವಾಣಿ ಕೇಂದ್ರ ಸ್ಥಾಪನೆ

» ಚಿತ್ರದುರ್ಗ

ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಸಂಬಂಧ ಚಿತ್ರದುರ್ಗ ವಿಧಾನಸಭಾ ಕ್ಷೇತ್ರಕ್ಕೆ ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದ್ದು, ಸಹಾಯವಾಣಿ ಸಂಖ್ಯೆ 08194-222416 ಆಗಿರುತ್ತದೆ. ಸಹಾಯವಾಣಿ ಕೇಂದ್ರದಲ್ಲಿ ದಿನದ 24ಗಂಟೆಯೂ(24*7)ಕಾರ್ಯನಿರ್ವಹಿಸುವಂತೆ ಸಿಬ್ಬಂದಿ ನಿಯೋಜಿಸಲಾಗಿರುತ್ತದೆ. ಸಹಾಯವಾಣಿ ಸಂಖ್ಯೆಗೆ ಚುನಾವಣಾ ಸಂಬಂಧ ಯಾವುದೇ ದೂರುಗಳಿದ್ದಲ್ಲಿ ಕರೆ ಮಾಡಬಹುದಾಗಿದೆ ಎಂದು ಚಿತ್ರದುರ್ಗ ತಾಲ್ಲೂಕು ತಹಶೀಲ್ದಾರ್ ಡಾ.ನಾಗವೇಣಿ ತಿಳಿಸಿದ್ದಾರೆ.

### ಅಬಕಾರಿ ಅಕ್ರಮ ತಡೆಗಾಗಿ 9 ಫ್ಲೈಯಿಂಗ್ ಸ್ಕ್ವಾಡ್ ತಂಡ ರಚನೆ

» ಚಿತ್ರದುರ್ಗ

ಸಾರ್ವತ್ರಿಕ ಲೋಕಸಭೆ ಚುನಾವಣೆ ನೀತಿ ಸಂಹಿತೆ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಅಕ್ರಮ ಮದ್ಯ ಸಂಗ್ರಹಣೆ, ಸಾಗಾಣಿಕೆ, ಮಾರಾಟ ಹಾಗೂ ಅಬಕಾರಿ ಇಲಾಖೆಗೆ ಸಂಬಂಧಪಟ್ಟ ಇನ್ನಿತರೆ ವಸ್ತುಗಳ ಅಬಕಾರಿ ಅಕ್ರಮಗಳನ್ನು ತಡೆಗಟ್ಟಲು ಜಿಲ್ಲೆಯಾದ್ಯಂತ 9 ಫ್ಲೈಯಿಂಗ್ ಸ್ಕ್ವಾಡ್ ತಂಡ ರಚನೆ ಮಾಡಲಾಗಿದೆ. ಇದರೊಂದಿಗೆ ಆಂಧ್ರಪ್ರದೇಶಕ್ಕೆ ಹೊಂದಿಕೊಂಡಿರುವ ಜಿಲ್ಲೆಯ ಅಂತರಾಜ್ಯ ಗಡಿ ಪ್ರದೇಶಗಳಾದ ಹಿರಿಯೂರು ತಾಲ್ಲೂಕು ಮದ್ದಿಹಳ್ಳಿ, ಚಳ್ಳಕೆರೆ ತಾಲ್ಲೂಕಿನ ದೊಡ್ಡಬಾದಿಹಳ್ಳಿ, ಮೊಳಕಾಲ್ಮೂರು ತಾಲ್ಲೂಕಿನ ಎದ್ದಲಬೊಮ್ಮನಹಟ್ಟಿಯಲ್ಲಿ ಅಬಕಾರಿ ತನಿಖಾ ಠಾಣೆ ಸ್ಥಾಪಿಸಿ ತಪಾಸಣೆ ನಡೆಸಲಾಗುತ್ತಿದೆ ಎಂದು ಚಿತ್ರದುರ್ಗ ಅಬಕಾರಿ ಉಪ ಆಯುಕ್ತ ಬಿ.ಮಾದೇಶ್ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಅಕ್ರಮ ಮದ್ಯ ಸಾಗಾಣಿಕೆ, ಮಾರಾಟ ಹಾಗೂ ಹಂಚುವುದು ಕಂಡುಬಂದರೆ, ಅಬಕಾರಿ ಉಪ ಅಧೀಕ್ಷಕ ರಾಜೇಂದ್ರ ಐ ಉಗಾರ್ ದೂರವಾಣಿ ಸಂಖ್ಯೆ 9449629510, 08194-230668, ವಲಯ ಅಬಕಾರಿ ನಿರೀಕ್ಷಕ ಶೇಖ್ ಇಮ್ರಾನ್ ದೂರವಾಣಿ ಸಂಖ್ಯೆ 08194-231393, 9482088555, ಹೊಳಲ್ಕೆರೆ ವಲಯ ಅಬಕಾರಿ ನಿರೀಕ್ಷಕಿ ಹೆಚ್.ಸವಿತಾ ದೂರವಾಣಿ ಸಂಖ್ಯೆ 08191-275902, 9663527579, ಹೊಸದುರ್ಗ ವಲಯ ಅಬಕಾರಿ ಉಪ ನಿರೀಕ್ಷಕ ಎಂ.ಭೂಪತಿ ದೂರವಾಣಿ ಸಂಖ್ಯೆ 08199-200575, 9036645736. ಹಿರಿಯೂರು ಉಪ ವಿಭಾಗ ಉಪ ಅಧೀಕ್ಷಕ ಕೆ.ಟಿ.ಧರ್ಮಪ್ಪ ದೂರವಾಣಿ ಸಂಖ್ಯೆ 08193-271730, 9481178474, ಚಳ್ಳಕೆರೆ ವಲಯ ಅಬಕಾರಿ ನಿರೀಕ್ಷಕ ಸಿ.ನಾಗರಾಜ್ ದೂರವಾಣಿ ಸಂಖ್ಯೆ 08195-251258, 9611976385, ಹಿರಿಯೂರು ವಲಯ ನಿರೀಕ್ಷಕಿ ಭಾರತಮ್ಮ ದೂರವಾಣಿ ಸಂಖ್ಯೆ 08193-271733, 8660075704, ಮೊಳಕಾಲ್ಮೂರು ವಲಯ ನಿರೀಕ್ಷಕ ಎಸ್.ರಮೇಶ್ ದೂರವಾಣಿ ಸಂಖ್ಯೆ 08198-229750 ಹಾಗೂ ಚಿತ್ರದುರ್ಗ ಅಬಕಾರಿ ಉಪ ಆಯುಕ್ತರ ಕಚೇರಿಯ ಅಬಕಾರಿ ನಿರೀಕ್ಷಕ ಎಂ.ಆರ್.ಸೋಮಶೇಖರ್ ಹಾಗೂ ಅಬಕಾರಿ ಉಪ ಆಯಕ್ತ ಬಿ.ಮಾದೇಶ್ ಟೋಲ್ ಫ್ರೀ ನಂಬರ್ 9663397015 ಗೆ ಸಂಪರ್ಕಿಸಿ.

---

ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಮಟ್ಟದ ಜಿಲ್ಲಾ ಸ್ವೀಪ್ ಸಮಿತಿ ಸಭೆಯಲ್ಲಿ ನಿರ್ಧಾರ

# ಲೋಕಸಭೆ: ಮತದಾನ ಪ್ರಮಾಣ ಹೆಚ್ಚಳಕ್ಕೆ ಪಣ

## ಮತದಾರರನ್ನು ಆಕರ್ಷಿಸಲು ಸಖಿ ಮತಗಟ್ಟೆ, ಥೀಮ್ ಆಧಾರಿತ ಹಾಗೂ ಯಂಗ್ ಬೂತ್ ಸ್ಥಾಪಿಸಲು ಸೂಚನೆ

» ಚಿತ್ರದುರ್ಗ



ಕಳೆದ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಶೇ.70.71ರಷ್ಟು ಮತದಾನವಾಗಿದ್ದು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಳೆದ ಬಾರಿಗಿಂತ ಶೇ.5ರಷ್ಟು ಮತದಾನ ಪ್ರಮಾಣ ಹೆಚ್ಚಳಕ್ಕೆ ರೂಪುರೇಷೆಗಳನ್ನು ಸಿದ್ದಪಡಿಸಲು ಜಿಲ್ಲಾ ಸ್ವೀಪ್ ಸಮಿತಿಯು ನಿರ್ಧರಿಸಿದ್ದು, ಮತದಾರರನ್ನು ಮತಗಟ್ಟೆಯತ್ತ ಸೆಳೆಯಲು ಆಕರ್ಷಣೀಯ ಕ್ರಮಗಳನ್ನು ತೆಗೆದುಕೊಳ್ಳಲು ನಿರ್ಧಾರ ಕೈಗೊಳ್ಳಲಾಯಿತು.

ಲೋಕಸಭಾ ಚುನಾವಣೆ-2024ರ ಸಂಬಂಧ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸ್ವೀಪ್ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ವಿಶೇಷವಾಗಿ ನಗರ ಪ್ರದೇಶದಲ್ಲಿ ಮತದಾನ ಜಾಗೃತಿಗಾಗಿ ಜಾಥಾ ಕಾರ್ಯಕ್ರಮ, ಕಲಾತಂಡಗಳು, ಭಿತ್ತಿಪತ್ರಗಳು, ಮನೆ ಮನೆಗೆ ಭೇಟಿ ನೀಡಿ ಅರಿವು ಮೂಡಿಸುವುದು, ಮ್ಯಾರಾಥಾನ್, ವಾಕಾತಾನ್ ಮೂಲಕ ಮತದಾನ ಬಗ್ಗೆ ಅರಿವು ಮೂಡಿಸಲು ನಿರ್ಣಯಿಸಲಾಯಿತು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ ಕಡಿಮೆ ಮತದಾನ ದಾಖಲಾದ ಸ್ಥಳಗಳಲ್ಲಿ ಮತದಾನ ಹೆಚ್ಚಳಕ್ಕೆ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸಬೇಕು ಎಂದು ತಿಳಿಸಿದ ಅವರು, ಪ್ರಾಥಮಿಕವಾಗಿ ಶೇ.50ಕ್ಕಿಂತ ಕಡಿಮೆ ಮತದಾನವಾಗಿರುವ ಮತಗಟ್ಟೆ ಕೇಂದ್ರಗಳ ವ್ಯಾಪ್ತಿಯಲ್ಲಿ, ವಾರ್ಡ್‌ಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಇದೇ ಮಾರ್ಚ್ 21 ರಿಂದ 23 ರವರೆಗೆ ಮೂರು ದಿನಗಳ ಕಾಲ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಶೇ.50ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಮತದಾರರು ಇರುವ ಮತಗಟ್ಟೆಗಳನ್ನು ವಿಧಾನಸಭಾ ಕ್ಷೇತ್ರವಾರು ಗುರುತಿಸಿ, ಮಹಿಳಾ ಅಧಿಕಾರಿಗಳೇ ಮತದಾನದ ದಿನದಂದು ನಿರ್ವಹಿಸಲು ನಿರ್ಣಯ ಕೈಗೊಳ್ಳಲಾಯಿತು. ಮಹಿಳೆಯರಲ್ಲಿ ಮತದಾನ ಕುರಿತು ಜಾಗೃತಿ ಮೂಡಿಸಲು ಹಾಗೂ ಚುನಾವಣಾ ಮುಖ್ಯವಾಹಿನಿಗೆ ಮಹಿಳೆಯರನ್ನುಸೆಳೆಯುವಉದ್ದೇಶದಿಂದ ಜಿಲ್ಲೆಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 5 ರಂತೆ ಒಟ್ಟು 30 ಸಖಿ (ಪಿಂಕ್) ಮತಗಟ್ಟೆ ಸ್ಥಾಪಿಸಲಾಗುತ್ತಿದೆ. ಸಖಿ ಮತಗಟ್ಟೆಗಳ ಜವಾಬ್ದಾರಿ ನಿರ್ವಹಣೆಗಾಗಿ ನಗರಸಭೆ ಪೌರಾಯುಕ್ತರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು, ವಿಕಲಚೇತನರ ಕಲ್ಯಾಣಾಧಿಕಾರಿಗಳನ್ನೊಳಗೊಂಡ ಉಪಸಮಿತಿಗೆ ಸೂಚಿಸಲಾಯಿತು. ಹಾಗೆಯೇ ಯುವ ಅಧಿಕಾರಿಗಳನ್ನು ಒಳಗೊಂಡ ತಂಡದಿಂದ ನಿರ್ವಹಿಸಲು "ಯಂಗ್ ಬೂತ್"ಗಳನ್ನುಗುರುತಿಸಬೇಕು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 1 ರಂತೆ ಆರು ವಿಧಾನಸಭಾ ಕ್ಷೇತ್ರಗಳಿಗೆ ಒಟ್ಟು 6 "ಯಂಗ್ ಬೂತ್"ಗಳನ್ನು ಸ್ಥಾಪಿಸಬೇಕು ಎಂದು ಹೇಳಿದರು.

ಮತಗಟ್ಟೆಗಳ ಪ್ರವೇಶದ್ವಾರದಲ್ಲಿ ಸ್ಥಳೀಯ ಐತಿಹಾಸಿಕ ಹಿನ್ನಲೆ ಮತ್ತು ಪ್ರಾಮುಖ್ಯತೆ ಆಧಾರದ ಮೇಲೆ ಕಡಿಮೆ ಮತದಾನವಾಗಿರುವ ಮತಗಟ್ಟೆಗಳಲ್ಲಿ ಚಿತ್ರದುರ್ಗದ ಐತಿಹಾಸಿಕ ಕೋಟೆ, ವಿ.ವಿ.ಸಾಗರ, ಇತರೆ ಚಿತ್ರಗಳನ್ನು ಬರೆಯಿಸಿ ಹೆಚ್ಚಿನ ಮತದಾರರು ಮತಗಟ್ಟೆಗೆ ಆಗಮಿಸಿ ಮತದಾನದ ಪ್ರಕ್ರಿಯೆಯಲ್ಲಿ ಭಾಗವಹಿಸಲು ಪ್ರೇರೇಪಿಸುವ ನಿಟ್ಟಿನಲ್ಲಿ ಕ್ರಮವಹಿಸಬೇಕು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1ರಂತೆ ಥೀಮ್ ಆಧಾರಿತ ಮತಗಟ್ಟೆಗಳನ್ನು ಸ್ಥಾಪಿಸಬೇಕು ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು,ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಸಮಾಜ ಕಲ್ಯಾಣಾಧಿಕಾರಿಗಳನ್ನೊಳಗೊಂಡ ಉಪಸಮಿತಿಗೆ ಸೂಚಿಸಲಾಯಿತು.

ಜಿಲ್ಲೆಯ ಎಲ್ಲಾ ಮತಗಟ್ಟೆ ಕೇಂದ್ರಗಳಲ್ಲಿ ಲಭ್ಯವಿರುವ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ಸಂಪರ್ಕ, ಪೀಠೋಪಕರಣ, ಶೌಚಾಲಯ, ಫ್ಯಾನ್, ಬೆಳಕಿನ ವ್ಯವಸ್ಥೆ, ರ್‍ಯಾಂಪ್, ಅಂಗವಿಕಲರಿಗೆ ವ್ಹೀಲ್ ಚೇರ್ ವ್ಯವಸ್ಥೆ ಸೇರಿದಂತೆ ಇತರೆ ಅಗತ್ಯ ಸೌಲಭ್ಯಗಳ ಬಗ್ಗೆ ಪರಿಶೀಲಿಸಿ ವರದಿ ನೀಡಬೇಕು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಅಂಗವಿಕಲರ ಕಲ್ಯಾಣಾಧಿಕಾರಿ ಎಂ.ವಿ.ವೀಣಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

---

## ಅಭಿವೃದ್ಧಿ ಬಗ್ಗೆ ಹೆಚ್ಚು ಚಿಂತನೆ ನಡೆಸಿ ಜಾಗೃತರಾಗಿ

» ಚಳ್ಳಕೆರೆ

ನಗರಸಭೆಗೆ ಐವರು ನಾಮನಿರ್ದೇಶಕಗೊಂಡ ಸದಸ್ಯರನ್ನು ಶಾಸಕ ಟಿ.ರಘುಮೂರ್ತಿ ಅವರ ಖಾಸಗಿ ನಿವಾಸದಲ್ಲಿ ಅಭಿನಂದಿಸಿದರು.

ನಗರಸಭೆಆಡಳಿತಕ್ಕೆಹೆಚ್ಚುಚುರುಕುಮುಟ್ಟಿಸಲು ಚುನಾಯಿತ ಸದಸ್ಯರೊಂದಿಗೆ ನಾಮನಿರ್ದೇಶನ ಸದಸ್ಯರೂ ಸೇರಿದಂತೆ ನಗರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಬೇಕು. ಸರ್ಕಾರದಿಂದ ನಾಮನಿರ್ದೇಶನಗೊಂಡ ನೀವುಗಳು ಸರ್ಕಾರ ಎಲ್ಲಾ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವ ಕಾರ್ಯಕ್ಕೆ ನಗರಸಭೆ ಆಡಳಿತದೊಂದಿಗೆ ಕೈಜೋಡಿಸಿಬೇಕು ಎಂದರು.

ನಾಮನಿರ್ದೇಶನ ಸದಸ್ಯರಾದ ಡಿ.ಕೆ. ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ಟಿ.ವೀರಭದ್ರಪ್ಪ, ಕೆ.ಎಂ.ನಟರಾಜ್, ನೇತಾಜಿಪ್ರಸನ್ನ ಇವರನ್ನು ಶಾಸಕರು ಅಭಿನಂದಿಸಿದರು. ಶಾಸಕರ ಆಶಯದಂತೆ ನಗರದ ಎಲ್ಲಾ ಸಮಸ್ಯೆಗಳಿಗೆ ಕ್ರಿಯಾಶೀಲವಾಗಿ ಸ್ಪಂದಿಸುವುದಲ್ಲದೆ, ನಗರಸಭೆಗೆ ಸಂಬಂಧಪಟ್ಟ ಸಾರ್ವಜನಿಕರ ಸಮಸ್ಯೆಗಳ ಬಗ್ಗೆಯೂ ಗಮನಹರಿಸುವ ಭರವಸೆಯನ್ನು ಐವರು ನೀಡಿದರು.



ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ವೀರಭದ್ರಪ್ಪ, ಶಶಿಧರ, ಕುಶಲಕರ್ಮಿಗಳ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಟಿ.ಪ್ರಭುದೇವ್,ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಕಾಂಗ್ರೆಸ್ ಮುಖಂಡರಾದ ಬೋರಣ್ಣ, ಗಿರಿಯಪ್ಪ, ಖಾದರ್, ಜಯಪ್ರಕಾಶ್, ಮೂಡಲಗಿರಿಯಪ್ಪ, ಮುಜೀಬ್, ಕೃಷ್ಣಮೂರ್ತಿ, ಬಸವರಾಜು ಮುಂತಾದವರು ಉಪಸ್ಥಿತರಿದ್ದರು.

## ಸಂಭ್ರಮದಿಂದ ನಡೆದ ಶ್ರೀ ಗುರು ಪರಪ್ಪಸ್ವಾಮಿ ರಥೋತ್ಸವ



» ಹೊಸದುರ್ಗ

ತಾಲೂಕಿನ ಶ್ರೀರಾಂಪುರ ಗ್ರಾಮದಲ್ಲಿ ನೆಲೆಸಿರುವ ಜನರ ಆರಾಧ್ಯ ದೈವ ಶ್ರೀ ಗುರು ಪರಪ್ಪಸ್ವಾಮಿಯ 94ನೇ ವರ್ಷದ ರಥೋತ್ಸವ ಮಂಗಳವಾರ ಮಧ್ಯಾನ್ಹ 3 ಗಂಟೆ ಸುಮಾರಿನಲ್ಲಿ ಅತ್ಯಂತ ಸಂಭ್ರಮ ಸಡಗರದಿಂದ ನಡೆಯಿತು. ರಥೋತ್ಸವದ ವೇಳೆ ವೀರಶೈವ ಸಮಾಜ, ಆರ್ಯವೈಶ್ಯ ಸಮಾಜ, ವಿಶ್ವಕರ್ಮ ಸಮಾಜ, ಬ್ರಾಹ್ಮಣ ಸಮಾಜದವರು ಸೇರಿದಂತೆ ವಿವಿಧ ಗ್ರಾಮಗಳ ಭಕ್ತಾದಿಗಳಿಂದ ವಸಂತ ಸೇವೆ ನಡೆಯಿತು. ರಾತ್ರಿ ದೇವಾಂಗ ಸಮಾಜ, ಹಾಲುಮತ ಸಮಾಜ, ಗಂಗಮತಸ್ಥ ಸಮಾಜ ಮತ್ತು ಕುಂಬಾರ ಸಮಾಜದವರು ಹಾಗೂ ಸಮಸ್ತ ಭಕ್ತಾದಿಗಳಿಂದ ಅನ್ನಸಂತರ್ಪಣೆ ನೆರವೇರಿತು. ಜಾತ್ರಾ ಮಹೋತ್ಸವದ ಪ್ರಯುಕ್ತ ಶ್ರೀ ಗುರುಪರಪ್ಪ ಸ್ವಾಮಿಯ ಗದ್ದುಗೆಗೆ ಪಂಚಾಮೃತ ಅಭಿಷೇಕ, ಪುಷ್ಪರೋಹಣ ಉತ್ಸವ, ಗರುಡೋತ್ಸವ, ಸರ್ಪ ವಾಹನೋತ್ಸವ, ಸಿಂಹ ವಾಹನೋತ್ಸವ ಮತ್ತು ಪಾರ್ಥ ಸಾರಥೋತ್ಸವ ಕಾರ್ಯಗಳ ನಡೆದವು. ಸ್ವಾಮಿಯ ಈ ಧಾರ್ಮಿಕ ಕಾರ್ಯಗಳಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ಪೂಜೆ ಸಲ್ಲಿಸಿ, ಭಕ್ತಿ ಸಮರ್ಪಿಸಿದರು.

## ಸಹಾಯವಾಣಿ ಕೇಂದ್ರ ಸ್ಥಾಪನೆ

**ಚಿತ್ರದುರ್ಗ:** ಚಳ್ಳಕೆರೆ ನಗರಸಭಾ ವ್ಯಾಪ್ತಿಯಲ್ಲಿ ಬೇಸಿಗೆ ಪ್ರಯುಕ್ತ ಸಮರ್ಪಕ ಕುಡಿಯುವ ನೀರು ನಿರ್ವಹಣೆಗಾಗಿ ಸಾರ್ವಜನಿಕರಿಂದ ದೂರುಗಳನ್ನು ಸ್ವೀಕರಿಸಲು 24*7 ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದೆ. ನಗರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಸಹಾಯವಾಣಿ ಸಂಖ್ಯೆ 08195-200093 ಗೆ ಕರೆ ಮಾಡಿ ದೂರು ಸಲ್ಲಿಸಬಹುದು ಎಂದು ಚಳ್ಳಕೆರೆ ನಗರಸಭೆ ಪೌರಾಯುಕ್ತ ಕೆ.ಜೀವನ್ ತಿಳಿಸಿದ್ದಾರೆ.

## ಅಬ್ದುಲ್ ಘನಿ ತಾಹಿರ್ ನೇಮಕ

**ದಾವಣಗೆರೆ:** ರಾಜ್ಯ ಕಾಂಗ್ರೆಸ್ ಅಲ್ಪಸಂಖ್ಯಾತ ವಿಭಾಗದ ರಾಜ್ಯ ಕಾರ್ಯದರ್ಶಿ ಅಬ್ದುಲ್ ಘನಿ ತಾಹಿರ್ ಅವರನ್ನು ಕರ್ನಾಟಕ ರಾಜ್ಯ ವಕ್ಫ್ ಪರಿಷತ್ತಿಗೆ ನಾಮ ನಿರ್ದೇಶನ ಮಾಡಿ ರಾಜ್ಯ ಸರಕಾರ ಆದೇಶ ನೀಡಿದೆ. ಅಬ್ದುಲ್ ಘನಿ ತಾಹಿರ್ ಅವರು ವಿದ್ಯಾರ್ಥಿ ಕಾಂಗ್ರೆಸ್‌ನಿಂದ ಪಕ್ಷದ ವಿವಿಧ ಘಟಕಗಳಲ್ಲಿ ಸೇವೆ ಮಾಡಿರುವುದನ್ನು ಗುರುತಿಸಿ ಹಾಗೂ ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅವರ ಶಿಫಾರಸ್ಸಿನ ಮೇರೆಗೆ ರಾಜ್ಯ ಸರಕಾರ ಕರ್ನಾಟಕ ರಾಜ್ಯ ವಕ್ಫ್ ಪರಿಷತ್ತಿಗೆ ನಾಮ ನಿರ್ದೇಶನ ಮಾಡಿದೆ. ಅಬ್ದುಲ್ ಜಬ್ಬಾರ್ ಸಾಬ್,ಅನ್ವರ್ ಬಾಷಾ,ಮೊಮ್ಮದ್ ಸಿರಾಜ್ ಹಾಗೂ ಮೊಮ್ಮದ್ ಇರ್ಷಾದ್ ನಾಮನಿರ್ದೇಶನಕ್ಕೆ ಕಾರಣಕರ್ತರಾಗಿದ್ದಾರೆ.

---

**ಪ್ರಮುಖ ಸುದ್ದಿ**

ಜಿಲ್ಲಾ ನ್ಯಾಯಾಧೀಶೆ ಕೆ.ಬಿ.ಗೀತಾ ಅಭಿಮತ

# ಶೋಷಣೆ ತಪ್ಪಿಸಲು ಕೃತಕ ಬುದ್ಧಿಮತ್ತೆ ಸಹಾಯಕ

» ಚಿತ್ರದುರ್ಗ

ಇಂದಿನ ತಂತ್ರಜ್ಞಾನ ಯುಗದಲ್ಲಿ ಆನ್‌ಲೈನ್ ಮೂಲಕ ಗ್ರಾಹಕರಿಗೆ ವಂಚನೆಯಾಗುತ್ತಿದೆ. ಇದೇ ನಿಟ್ಟಿನಲ್ಲಿ ಗ್ರಾಹಕರಿಗೆ ಉಂಟಾಗುವ ಮೋಸ ಹಾಗೂ ಶೋಷಣೆ ತಪ್ಪಿಸಲು ಕೃತಕ ಬುದ್ಧಿಮತ್ತೆ ಸಹಾಯಕವಾಗಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ. ಗೀತಾ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.





ಅಮೇರಿಕಾದ ಮಾಜಿ ರಾಷ್ಟ್ರಾಧ್ಯಕ್ಷ ಜಾನ್ ಎಫ್. ಕೆನಡಿ 1962 ಮಾರ್ಚ್ 15 ರಂದು ಅಮೇರಿಕಾದ ಸಂಸತ್ತಿನಲ್ಲಿ ಮೊಟ್ಟ ಮೊದಲ ಬಾರಿಗೆ ಗ್ರಾಹಕರ ಹಕ್ಕುಗಳ ಕುರಿತು ಧ್ವನಿ ಎತ್ತಿದರು. ಇದರ ನೆನಪಿಗಾಗಿ 1983 ರಿಂದ ಪ್ರತಿ ವರ್ಷ ಮಾರ್ಚ್ 15 ರಂದು ವಿಶ್ವ ಗ್ರಾಹಕರ ದಿನಾಚರಣೆ ಆಚರಿಸಲಾಗುತ್ತದೆ. ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ವಿಶ್ವ ಗ್ರಾಹಕರ ದಿನಾಚರಣೆ ಎರಡು ಬೇರೆ ಬೇರೆಯಾಗಿವೆ. ಪ್ರತಿ ವರ್ಷ ವಿಶ್ವ ಗ್ರಾಹಕರ ದಿನದಂದು ಒಂದು ಧ್ಯೇಯ ವಾಕ್ಯ ಇರುತ್ತದೆ. ಈ ಬಾರಿ ಧ್ಯೇಯ ವಾಕ್ಯ "ಗ್ರಾಹಕರಿಗಾಗಿ ನ್ಯಾಯ ಹಾಗೂ ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ " ಎಂಬುದಾಗಿದೆ. ಗ್ರಾಹಕರಿಗೆ ಆಗುವ ಮೋಸ, ಶೋಷಣೆ ತಪ್ಪಿಸುವ ಸಲುವಾಗಿ ಕೃತಕ ಬುದ್ಧಿಮತ್ತೆಯ ಬಳಕೆ ಎಲ್ಲೆಡೆ ಹೆಚ್ಚಾಗಲಿದೆ. ಗ್ರಾಹಕರಿಗೆ ಉತ್ತಮ ಸರಕು ಸೇವೆಗಳು ದೊರಕಬೇಕು. ಅನ್ಯಾಯ ಹಾಗೂ ತೊಂದರೆ ಉಂಟಾಗಬಾರದು. ಗ್ರಾಹಕರ ಹಿತರಕ್ಷಣೆಯೇ ಗ್ರಾಹಕರ ಕಾಯ್ದೆಯ ಮುಖ್ಯ ಅಂಶವಾಗಿದೆ. ಈ ಕಾರಣಕ್ಕಾಗಿ ದೇಶದಲ್ಲಿ ಗ್ರಾಹಕರ ಹಿತರಕ್ಷಣೆಯ ಕಾಯ್ದೆ ಜಾರಿ ಮಾಡಲಾಗಿದೆ ಎಂದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಸಣ್ಣ ಪುಟ್ಟ ವಸ್ತುಗಳು, ತರಕಾರಿ ಖರೀದಿಸುವ ಸಮಯದಲ್ಲಿ ಚೌಕಾಸಿ ಮಾಡುತ್ತೇವೆ. ಆದರೆ ದೊಡ್ಡ ದೊಡ್ಡ ಉತ್ಪನ್ನಗಳ ಖರೀದಿಸುವಾಗ ಮೋಸ ಹೋಗುತ್ತೇವೆ. ಇತ್ತೀಚೆಗೆ ಸೈಬರ್ ವಂಚನೆಗಳು ಹೆಚ್ಚಾಗುತ್ತಿವೆ. ಆನ್‌ಲೈನ್ ಮೂಲಕ ವಸ್ತುಗಳನ್ನು ಖರೀದಿಸುವಾಗ ಹೆಚ್ಚು ಜಾಗರೂಕರಾಗಿರಬೇಕು. ದುಡಿದು ಗಳಿಸುವ ಪ್ರತಿಯೊಂದು ರೂಪಾಯಿಗೂ ಬೆಲೆಯಿದೆ. ವಸ್ತುಗಳನ್ನು ಖರೀದಿಸಿ ಮೊಸ ಹೋದರೆ ಶ್ರಮ ವ್ಯರ್ಥವಾದಂತೆ. ಮೊಸಹೋದ ಗ್ರಾಹಕರಿಗೆ ನೆರವು ನೀಡಲು ಜಿಲ್ಲಾ ಹಂತದಲ್ಲಿ ಜಿಲ್ಲಾ ಗ್ರಾಹರ ವೇದಿಕೆಗಳಿವೆ. ಕೊಂಡ ವಸ್ತುಗಳಿಗೆ ತಪ್ಪದೇ ಬಿಲ್ ಪಡೆಯಬೇಕು ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಮಾತನಾಡಿ, ತಂತ್ರಜ್ಞಾನದ ಈ ಯುಗದಲ್ಲಿ ಯಾವುದೇ ವಸ್ತುವನ್ನು ಎಲ್ಲಿ ಬೇಕಾದರೂ ಮಾರಾಟ ಮಾಡಬಹುದು, ಕೊಂಡುಕೊಳ್ಳಬಹುದು. ಇ-ಕಾಮರ್ಸ್ ವಹಿವಾಟು ಹೆಚ್ಚಾಗಿದೆ. ಹಲವಾರು ಆನ್‌ಲೈನ್ ಪ್ಲಾಟ್ ಫಾರಂಗಳು ಆನ್‌ಲೈನ್ ಮೂಲಕ ಹಣ ಪಡೆದು ವಸ್ತುಗಳನ್ನು ಮನೆಬಾಗಿಲಿಗೆ ಮುಟ್ಟಿಸುತ್ತವೆ. ಇಂತಹ ಸಂದರ್ಭಗಳಲ್ಲಿ ಗ್ರಾಹಕರ ಹಕ್ಕುಗಳಿಗೆ ಚ್ಯುತಿ ಬರಬಾರದು. ವಸ್ತುಗಳನ್ನು ಕೊಳ್ಳುವಾಗ ಉತ್ಪನ್ನದ ಗುಣಮಟ್ಟವನ್ನು ಪರೀಕ್ಷಿಸಿ ತಿಳಿದು ನಂತರ ವ್ಯವಹರಿಸಬೇಕು ಎಂದು ಹೇಳಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಗ್ರಾಹಕರ ಹಕ್ಕುಗಳ ಕುರಿತು ಉಪನ್ಯಾಸ ನೀಡಿದರು. ರಂಗನಿರ್ದೇಶಕ ಕೆ.ಪಿ.ಎಂ. ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿದರು. ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಕೆ.ಪಿ. ಮಧುಸೂಧನ್ ಸ್ವಾಗತಿಸಿದರು.

ಕಾನೂನು ಮಾಪನಾ ಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕ ಎಂ.ಗುರುಪ್ರಸಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ್, ಕಂದಾಯ ಇಲಾಖೆ ಶಿರಸ್ತೆದಾರ ವೀರಣ್ಣ ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಇದ್ದರು.

## ಫಾಸ್ಟ್ ನ್ಯೂಸ್

### ನಮ್ಮ ಜನ ಉದ್ಯೋಗ ಸಮಾಚಾರ

» **ಬೆಂಗಳೂರು:**

ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ನೇಮಕಾತಿ ಅಧಿಸೂಚನೆ ಪ್ರಕಟಿಸಲಾಗಿದೆ. 93 ಬ್ಯಾಂಕ್ ಸಹಾಯಕರ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಹುದ್ದೆ ಅರ್ಜಿ ಸಲ್ಲಿಕೆ, ವೇತನ ಸೇರಿದಂತೆ ಸಂಪೂರ್ಣ ಮಾಹಿತಿ ಇಲ್ಲಿದೆ.

**ಹುದ್ದೆ ವಿವರ:** ಒಟ್ಟು 93 ಬ್ಯಾಂಕ್ ಸಹಾಯಕರ ಹುದ್ದೆಗಳ ಭರ್ತಿ ನಡೆಯಲಿದ್ದು, ಇದರಲ್ಲಿ 8 ಹುದ್ದೆಗಳು ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳಿಗೆ ಮೀಸಲಾಗಿದೆ.

**ವಿದ್ಯಾರ್ಹತೆ:** ಅಭ್ಯರ್ಥಿಗಳು ಯಾವುದೇ ವಿಷಯದಲ್ಲಿ ಪದವಿ ಪೂರ್ಣಗೊಳಿಸಿರಬೇಕು. ಕನ್ನಡವನ್ನು ಸ್ಪಷ್ಟವಾಗಿ ಓದುವ, ಬರೆಯುವ, ಮಾತನಾಡುವ, ಅರ್ಥಮಾಡಿಕೊಳ್ಳುವ ಸಾಮರ್ಥ್ಯ ಹೊಂದಿರಬೇಕು. ಸಾಮಾನ್ಯ ಕಂಪ್ಯೂಟರ್ ಜ್ಞಾನವನ್ನುಹೊಂದಿರಬೇಕು.ಸಹಕಾರ ವಿಷಯದಲ್ಲಿ ವಿದ್ಯಾರ್ಹತೆ ಮತ್ತು ಅನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

**ವಯೋಮಿತಿ:** ಈ ಹುದ್ದೆಗಳಿಗೆ ಕನಿಷ್ಠ 18, ಗರಿಷ್ಠ 35 ವರ್ಷ. ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ 3ವರ್ಷ ಮತ್ತು ಪ.ಜಾ, ಪ.ಪಂ ಅಭ್ಯರ್ಥಿಗಳಿಗೆ 5 ವರ್ಷ ವಯೋಮಿತಿ ಸಡಿಲಿಕೆ ಮಾಡಲಾಗಿದೆ.

**ವೇತನ:** 28,425 –87,125 ರೂ ಮಾಸಿಕ

**ಅರ್ಜಿ ಸಲ್ಲಿಕೆ:** ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಮಾಡಲಾಗಿದೆ. ಸಾಮಾನ್ಯ ಮತ್ತು ಹಿಂದುಳಿದ ಅಭ್ಯರ್ಥಿಗಳಿಗೆ 1000 ಜೊತೆಗೆ ಜಿಎಸ್‌ಟಿ ಮತ್ತು ಪ. ಜಾ, ಪ. ಪಂ ಅಭ್ಯರ್ಥಿಗಳಿಗೆ 500 ರೂ ಜೊತೆಗೆ ಜಿಎಸ್‌ಟಿ ಅರ್ಜಿ ಶುಲ್ಕ ವಿಧಿಸಲಾಗುವುದು.

**ಆಯ್ಕೆ ವಿಧಾನ:** ಅಭ್ಯರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಮೌಖಿಕ ಸಂದರ್ಶನ ಮೂಲಕ ಆಯ್ಕೆಈ ಹುದ್ದೆಗೆ ಮಾರ್ಚ್ 7ರಿಂದ ಅರ್ಜಿ ಸಲ್ಲಿಕೆ ಆರಂಭವಾಗಿದ್ದು, ಅರ್ಜಿ ಸಲ್ಲಿಕೆಗೆ ಕಡೇಯ ದಿನ ಮೇ 6 ಆಗಿದೆ. ಈ ಹುದ್ದೆ ಕುರಿತು ಹೆಚ್ಚಿನ ಮಾಹಿತಿ ಮತ್ತು ಅಧಿಕೃತ ಅಧಿಸೂಚನೆಗೆ ಅಭ್ಯರ್ಥಿಗಳು karnatakaapex.com ಗೆ ಭೇಟಿ ನೀಡಬಹುದು.

### ಪಂಡರಹಳ್ಳಿಯಲ್ಲಿ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರ ಆರಂಭ

» **ಚಿತ್ರದುರ್ಗ**

ಎಸ್.ಜೆ .ಎಂ.ವಿದ್ಯಾಪೀಠ ಚಿತ್ರದುರ್ಗ, ಯುವ ಸಬಲೀಕರಣ ಇಲಾಖೆ ಕರ್ನಾಟಕ ಸರ್ಕಾರ,ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು ಹಾಗೂ ಎಸ್. ಜೆ.ಎಮ್. ಪಾಲಿಟೆಕ್ನಿಕ್ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಇದೇ ಮಾರ್ಚ್ 20ರ 2024 ರಿಂದ 26ರ ವರೆಗೆ ಚಿತ್ರದುರ್ಗ ತಾಲೂಕಿನ ಪಂಡರಹಳ್ಳಿ ಗ್ರಾಮದಲ್ಲಿ 2023–24 ನೇ ಸಾಲಿನ ವಾರ್ಷಿಕ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಏರ್ಪಡಿಸಲಾಗಿದೆ ಎಂದು ಕಾಲೇಜಿನ ಪ್ರಾಚಾರ್ಯರು ಹಾಗೂ ಶಿಬಿರಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಲ್ಲಿ ಸಮರ್ಪಣಾಭಾವದ ದುಡಿಮೆ, ತನ್ಮೂಲಕ ಸ್ವಾತಂತ್ರ ಮತ್ತು ಐಕ್ಯತೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಹಿಂಸಾ ಪರವಾದ ಕೃತ್ಯಗಳಲ್ಲಿ ತೊಡಗದೆ, ಧರ್ಮ, ಭಾಷೆ, ಮತ, ರಾಜಕೀಯ, ಆರ್ಥಿಕ ವೈಷಮ್ಯಗಳನ್ನು ಸಂವಿಧಾನಾತ್ಮಕವಾಗಿ ಪರಿಹರಿಸುವ ನಿಟ್ಟಿನಲ್ಲಿ ಈ ಶಿಬಿರದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ರೂಢಿಸಿಕೊಂಡು. ಅಂತಹ ಕೆಲಸಗಳನ್ನು ಗಾಂಧೀಜಿ ಅವರು ಕಂಡ ಗ್ರಾಮ ಸ್ವರಾಜ್ಯ ಕಲ್ಪನೆಯು ಸಾಕಾರ ಗೊಳಿಸುವ ನಿಟ್ಟಿನಲ್ಲಿ ಸಹಕಾರಿ ಎಂಬ ತತ್ವದ ಅಡಿಯಲ್ಲಿ ಸಾಗಿ ಬಂದಿರುವ ಏನ್ ಎಸ್ ಎಸ್ ಶಿಬಿರವು ಅದಕ್ಕೆ ತಕ್ಕಂತೆ ಅನೇಕ ಸಾಮಾಜಿಕ ಕಾರ್ಯಗಳಾದ ಸ್ವಚ್ಛತೆ, ಶಿಸ್ತು, ಪರಿಸರ ಸಂರಕ್ಷಣೆ ,ವಿಶ್ವಭಾತೃತ್ವ ಬೆಸೆಯುವ, ಆರೋಗ್ಯ, ಯೋಗ, ಹಾಸ್ಯ, ಸ್ವಯಂ ಉದ್ಯೋಗದ ಬಗ್ಗೆ ಮಾಹಿತಿ, ಅಪರಾಧ ತಡೆಯುವ, ಶಿಕ್ಷಣ ಮತ್ತು ಸೌಲಭ್ಯ ಕುರಿತು , ಕೌಶಲ್ಯ ಭಾರತ, ನೇತ್ರದಾನದ ಬಗ್ಗೆ ,ಮೊಬೈಲ್ ತಾಂತ್ರಿಕತೆ ಸೇರಿದಂತೆ ನಾಡು –ನುಡಿ ,ನೆಲ–ಜಲ ಬಗೆಗೆ ಸೇರಿದಂತೆ ಇನ್ನು ಅನೇಕ ವಿಷಯಗಳನ್ನು ಒಳಗೊಂಡ ಚರ್ಚೆ ಮತ್ತು ಸಂವಾದ, ಚಿಂತನೆಗಳು ನಡೆಯಲಿವೆ ಎಂದು ಶಿಬಿರದ ನಿರ್ದೇಶಕರು ಮತ್ತು ಪ್ರಾಚಾರ್ಯರೂ ಆದ ಎಸ್. ವಿ. ರವಿಶಂಕರ್ ಹಾಗೂ ಶಿಬಿರಾಧಿಕಾರಿಗಳು ಉಪನ್ಯಾಸಕರೂ ಆದ ಟಿ. ಗೋವಿಂದರಾಜು ಅವರುಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವಾರ್ಷಿಕ ಸೇವಾ ಯೋಜನೆ ಶಿಬಿರದ ಉದ್ಘಾಟನಾ ಸಮಾರಂಭವು ಮಾರ್ಚ್ 20ರ ಬುಧವಾರ ಸಂಜೆ 6 ಗಂಟೆಗೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನೆರವೇರಲಿದೆ. ಸಮಾರಂಭದ ಸಾನಿಧ್ಯವನ್ನು ಚಿತ್ರದುರ್ಗ ಶ್ರೀ ಮುರುಘಾಮಠದ ಉಸ್ತುವಾರಿ ಶ್ರೀಗಳು ಹಾಗೂ ದಾವಣಗೆರೆ ವಿರಕ್ತಮಠದ ಬಸವಪ್ರಭು ಮಹಾಸ್ವಾಮಿಗಳು ವಹಿಸಲಿದ್ದಾರೆ. ಉದ್ಘಾಟನೆಯನ್ನು ಗೊಡಬನಾಳ್ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಎಲ್. ಮಧುರಮೇಶ್ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಎಸ್. ಜೆ.ಎಂ ವಿದ್ಯಾಪೀಠದ ಆಡಳಿತ ಮಂಡಳಿ ಅಧ್ಯಕ್ಷರಾದ ಶಿವಯೋಗಿ .ಸಿ. ಕಳಸದ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಕಾರ್ಯಕ್ರಮ ಸಂಯೋಜನಾಧಿಕಾರಿಗಳಾದ ಬೆಂಗಳೂರಿನ ಡಾ. ಗುರುಪ್ರಸಾದ್ ಎಂ. ಹೂಗಾರ್, ಗೊಡಬನಾಳ್ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಮಾರುತಿ ಭಾಗವಹಿಸಲಿದ್ದಾರೆ.

# ದೇಶದ ಭವಿಷ್ಯ ಕಾರ್ಯಕರ್ತರ ಕೈಯಲ್ಲಿದೆ

## ಪ್ರಚಾರ ಸಭೆಯಲ್ಲಿ ಗಾಯತ್ರಿ ಸಿದ್ದೇಶ್ವರ್ ಹೇಳಿಕೆ | ಮಾಯಕೊಂಡ ವಿಧಾನಸಭಾ ಕ್ಷೇತ್ರದಲ್ಲಿ ಮತಯಾಚನೆ

» **ದಾವಣಗೆರೆ**





ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನ ಮಂತ್ರಿ ಮಾಡಲು ನಾವೆಲ್ಲ ಶ್ರಮಿಸಬೇಕು. ಈ ದೇಶದ ಭವಿಷ್ಯ ಕಾರ್ಯಕರ್ತರ ಕೈಯಲ್ಲಿದೆ. ನಿಮ್ಮೆಲ್ಲರ ಆಶೀರ್ವಾದ ನನ್ನ ಮೇಲಿರಲಿ ಎಂದು ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ಮನವಿ ಮಾಡಿದರು.

ಮಾಯಕೊಂಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಾಡಾ ಗ್ರಾಮದ ಮರುಳಸಿದ್ದೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಪ್ರಮುಖ ಕಾರ್ಯಕರ್ತರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ನೀವು ನಾಲ್ಕು ಬಾರಿ ಜಿ.ಎಂ.ಸಿದ್ದೇಶ್ವರ್ ಅವರನ್ನು ಗೆಲ್ಲಿಸಿದ್ದೀರಿ. ಈ ಬಾರಿ ನಿಮ್ಮ ಆಶೀರ್ವಾದ ನನ್ನ ಮೇಲಿರಲಿ. ಕೇಂದ್ರ ಸರ್ಕಾರದ ಯೋಜನೆಗಳು ಜನರಿಗೆ ತಲುಪಿದ್ದು, ಅವುಗಳನ್ನು ಮುಂದಿಟ್ಟುಕೊಂಡು ನಾವು ಮತಯಾಚನೆ ಮಾಡಬೇಕು. ನಾವೆಲ್ಲರೂ ಒಟ್ಟಾಗಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಬೇಕು ಎಂದು ಕರೆ ನೀಡಿದರು.ಸಂಸದ ಜಿ.ಎಂ.ಸಿದ್ದೇಶ್ವರ್ ಮಾತನಾಡಿ, ದಾವಣಗೆರೆ ಅಭಿವೃದ್ಧಿಯ ಜೊತೆಗೆ ಬಾಡಾ ಗ್ರಾಮಕ್ಕೂ ಸಾಕಷ್ಟು ಅನುದಾನ ಹಾಕಿದ್ದೇನೆ. ನಮ್ಮ ಕುಟುಂಬಕ್ಕೆ ಮಾಯಕೊಂಡ ಕ್ಷೇತ್ರದ ಜನ 7 ಬಾರಿ ಹೆಚ್ಚಿನ ಮತ ನೀಡಿ ಆಶೀರ್ವಾದ ಮಾಡಿದ್ದೀರಿ. ಯುಗಾದಿ ಹಬ್ಬ ಮುಗಿದ ಮೇಲೆ ಚುನಾವಣಾ ಕಾವು ಆರಂಭವಾಗಲಿದೆ ಎಂದರು.ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿಯಾದಮೇಲೆ ದೇಶ ಸಾಕಷ್ಟು ಮುಂದುವರಿದಿದೆ. ನಾವು ಕಾಂಗ್ರೆಸ್ ಕೈಗೆ ಮತ್ತೆ ಅಧಿಕಾರ ಕೊಟ್ಟರೆ ಟಿಪ್ಪು ಸುಲ್ತಾನ್, ಔರಂಗಜೇಬ್ ಯಾವ ರೀತಿಯ ದುರಾಡಳಿತ ನೀಡಿದ್ರೋ ಅದೇ ರೀತಿ ದುರಾಡಳಿತ ನೀಡುತ್ತಾರೆ. ನಮ್ಮ ದೇಶಕ್ಕೆ ಪುನಃ ಅಂತಹ ದುರಾಡಳಿತ ಬರಬಾರದು ಎಂದರೆ ನಾವೆಲ್ಲ ಗಾಯತ್ರಿ ಸಿದ್ದೇಶ್ವರ್ ಅವರನ್ನು ಗೆಲ್ಲಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸಬೇಕು ಎಂದು ತಿಳಿಸಿದರು.

ಲೋಕಸಭಾ ಚುನಾವಣಾ ಸಂಚಾಲಕ ಹನಗವಾಡಿ ವೀರೇಶ್ ಮಾತನಾಡಿ, ಸೂರ್ಯ, ಚಂದ್ರ ಇರೋದು ಎಷ್ಟು ಸತ್ಯವೋ ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಿ ಆಗುವುದು ಅಷ್ಟೇ ಸತ್ಯ ಎಂದು ಭವಿಷ್ಯ ನುಡಿದರು.ಮಹಿಳಾಮೋರ್ಚಾ ರಾಜ್ಯಾಧ್ಯಕ್ಷೆ ಮಂಜುಳಾಮಾತನಾಡಿ, ದಾವಣಗೆರೆ ಲೋಕಸಭಾ ಕ್ಷೇತ್ರದ ಸೋಲಿಲ್ಲದ ಸರದಾರ ಸಿದ್ದೇಶ್ವರ್ ಅವರ ಪತ್ನಿ ಗಾಯತ್ರಿ ಸಿದ್ದೇಶ್ವರ್ ಅವರಿಗೆ ಹೈಕಮಾಂಡ್ ಟಿಕೆಟ್ ನೀಡಿದೆ. ಇವರ ಗೆಲುವಿಗೆ ನಾವು ಶ್ರಮಿಸಬೇಕು ಎಂದರು.

ಹರಿಹರ ಬಿಜೆಪಿ ಶಾಸಕ ಬಿ.ಪಿ.ಹರೀಶ್, ಬಿಜೆಪಿ ಜಿಲ್ಲಾಧ್ಯಕ್ಷ ಎನ್.ರಾಜಶೇಖರ್ , ಮಾಜಿ ಶಾಸಕ ಪ್ರೊ.ಲಿಂಗಣ್ಣ, ಬಿಜೆಪಿ ಮುಖಂಡರಾದ ಜೀವನಮೂರ್ತಿ ಜಿ.ಎಸ್.ಶ್ಯಾಮ, ಬಿ.ಎಸ್.ರಮೇಶ್, ಓಂಕಾರಪ್ಪ, ಕಾರಿಗನೂರು ಗಂಗಾಧರ್, ಅನಿಲ್ನಾಯ್ಕ್, ಮತ್ತಿತರರು ಇದ್ದರು.

## ಗೋಪನಹಳ್ಳಿ: ಗಾಣಗಟ್ಟೆ ಮಾಯಮ್ಮದೇವಿಯ 2ನೇ ವರ್ಷದ ಪೂಜಾ ಮಹೋತ್ಸವ ಯಶಸ್ವಿ

» **ಚಳ್ಳಕೆರೆ**



ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಜೆ.ಪಿ.ರಂಗಪ್ಪ ಬಡಾವಣೆಯಲ್ಲಿ ಎರಡನೇ ವರ್ಷದ ಗಾಣಗಟ್ಟೆಮಾಯಮ್ಮದೇವಿಯ ಪೂಜಾ ಮಹೋತ್ಸವವನ್ನು ಅದ್ದೂರಿಯಾಗಿ ನೂರಾರು ಭಕ್ತರ ಸಮ್ಮುಖದಲ್ಲಿ ಆಚರಿಸಲಾಯಿತು.

ದಳಪತಿ ಜಿ.ಪಿ.ತಮ್ಮೇಗೌಡರು, ಅರ್ಚಕ ಕೆ.ಎನ್.ಬಸವರಾಜು ಹಾಗೂ ನೂರಾರು ಭಕ್ತರು ಸೇರಿ ಗ್ರಾಮದ ಗರಣಿ ಹಳ್ಳಕ್ಕೆ ತೆರಳಿ ಗಂಗಾ ಪೂಜೆ ನೆರವೇರಿಸಿಕೊಂಡು ದೇವಿಗೆ ಪ್ರಾಣಪ್ರತಿಷ್ಠಾಪನೆಯೊಂದಿಗೆ ವಿಶೇಷ ಅಲಂಕಾರ, ಅಭಿಷೇಕ ಪೂಜೆ ನಡೆಸಿ ಮಂಗಳವಾದ್ಯಗಳೊಂದಿಗೆ ಗ್ರಾಮದ ಗುಡಿ ಆವರಣಕ್ಕೆ ದೇವಿಯನ್ನು ತರಲಾಯಿತು. ನಂತರ ಗ್ರಾಮದ ನೂರಾರು ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದರು. ಬೆಳಗ್ಗೆನಿಂದ ಸಂಜೆವರೆಗೂ ಪೂಜಾ ವಿಧಿವಿಧಾನಗಳನ್ನು ನಡೆಸಿದ ನಂತರ ಸಂಜೆ ಎಲ್ಲಾ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಗಿತ್ತು. ಗಾಣಗಟ್ಟೆ ಮಾಯಮ್ಮ ದೇವಿ ಉತ್ಸವವನ್ನು ಗ್ರಾಮಸ್ಥರು ಅಚ್ಚುಕಟ್ಟಾಗಿ ನೆರವೇರಿಸಿದರು. ಈ ಸಂದರ್ಭದಲ್ಲಿ ಉತ್ತಮ ಮಳೆ, ಬೆಳೆಗಾಗಿ ಪ್ರಾರ್ಥನೆ ಸಲ್ಲಿಸಲಾಯಿತು ಎಂದು ಪೂಜಾರಿ ಕೆ.ಎನ್.ಬಸವರಾಜು ತಿಳಿಸಿದರು.

## ಮಹಿಳೆಯರ ಸ್ವಾವಲಂಬಿ ಬದುಕಿಗಾಗಿ ಅನೇಕ ಯೋಜನೆ ಮೂಲಕ ನೆರವು: ಶಶಿಕಲಾ



» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆವತಿಯಿಂದ ಮಹಿಳೆಯರ ಸ್ವಸಹಾಯ ಗುಂಪುಗಳನ್ನು ರಚಿಸಿ ಅವರಿಗೆ ಆರ್ಥಿಕವಾಗಿ ಲಾಭವಾಗುವಂತಹ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ ಎಂದು ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ತಿಳಿಸಿದರು. ಅವರು, ಮೀರಸಾಬಿಹಳ್ಳಿ ಗ್ರಾಮ ವಲಯದ ಶ್ರಾವಣಿ ಜ್ಞಾನವಿಕಾಶ ಕೇಂದ್ರದ ಸದಸ್ಯರಿಗೆ ಟೈಲರಿಂಗ್ ಕ್ಲಾಸ್ ತರಬೇತಿ ಕಾರ್ಯಕ್ರಮ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮಹಿಳೆಯರಿಗೆ ಸ್ವಾವಲಂಬನೆ ಜೀವನ ನಿರ್ವಹಿಸಲು ಟೈಲರಿಂಗ್ ತರಬೇತಿ ನೀಡಿ ಸ್ವಯಂ ಉದ್ಯೋಗ ಪಡೆಯುವ ಅವಕಾಶವನ್ನು ಕಲ್ಪಿಸಿಕೊಡಲಾಗಿದೆ. ಇಂತಹ ಯೋಜನೆಗಳ ಸದುಪಯೋಗವನ್ನು ಪೂರ್ಣಪ್ರಮಾಣದಲ್ಲಿ ಪಡೆದುಕೊಳ್ಳಬೇಕು. ಮಹಿಳೆ ಇಂದು ಸರ್ವಶಕ್ತಳಾಗಿ ಹೊರಹೊಮ್ಮಿ ಸಮಾಜದಲ್ಲಿ ಎಲ್ಲಾ ವರ್ಗಗಳೊಂದಿಗೆ ವಿಶ್ವಾಸ ಹೊಂದಿದ್ದಾಳೆ. ಬಾಹ್ಯಾಕಾಶ ವಿಭಾಗದಲ್ಲಿ ಮಹಿಳೆ ಕಾರ್ಯನಿರ್ವಹಿಸಿ ಸೈಎನ್ನಿಸಿಕೊಂಡಿದ್ದಾಳೆ. ಮಹಿಳೆಯರ ಆರ್ಥಿಕ ಸ್ವಾವಲಂಬನೆ ಉತ್ತಮ ಪಡಿಸಿವ ಎಲ್ಲಾ ಯೋಜನೆಗಳು ಕಾರ್ಯಗತ ಮಾಡಲು ಹಂತ, ಹಂತವಾಗಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಗುವುದು ಎಂದರು. ಗ್ರಾಮ ಪಂಚಾಯಿತಿ ಸದಸ್ಯೆ ಗೀತಮ್ಮ ಮಾತನಾಡಿ, ಮಹಿಳೆಯರನ್ನು ಸ್ವಾವಲಂಬಿ ಬದುಕಿತ್ತ ದೃಢ ಹೆಜ್ಜೆ ಇಡಲು ಇಂತಹ ಯೋಜನೆಗಳು ಸಹಕಾರಿ ಪ್ರತಿನಿತ್ಯ ಶ್ರಮವಹಿಸಿ ದುಡಿಯುವ ಮಹಿಳೆ ಬದುಕಿನಲ್ಲಿ ಆರ್ಥಿಕ ಸ್ವಾವಲಂಬನೆಯನ್ನು ಸ್ಥಾಪಿಸಲು ಹೊರಟಿರುವುದು ಸಂತಸ ವಿಷಯ. ಎಲ್ಲರೂ ಮಹಿಳಾ ಸಾಧನೆಯ ಬಗ್ಗೆ ಹೆಮ್ಮೆಪಡಬೇಕು ಎಂದರು. ಒಕ್ಕೂಟದ ಅಧ್ಯಕ್ಷೆ ಚಂದ್ರಕಲಾ, ವಲಯ ಮೇಲ್ವಿಚಾರಕಿ ಪದ್ಮಾವತಿ, ಸಮನ್ವಯಾಧಿಕಾರಿ ಭವಾನಿಇಂದಿರಾ, ಸೇವಾಪ್ರತಿನಿಧಿ ಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು.

## ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀಮತಿ ಗಾಯತ್ರಿ ಸಿದ್ದೇಶ್ವರ್‌ರವರಿಗೆ ಬಿಜೆಪಿ ರೈತ ಮೋರ್ಚಾ ಕಾರ್ಯದರ್ಶಿ ಮಾಲಾರ್ಪಣೆ

» **ಚಿತ್ರದುರ್ಗ**



ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಬಿಜೆಪಿ. ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಶ್ರೀಮತಿ ಗಾಯತ್ರಿ ಸಿದ್ದೇಶ್ವರ್‌ರವರಿಗೆ ದಾವಣಗೆರೆ ಜೆ.ಎಂ.ಐ.ಟಿ. ಅತಿಥಿ ಗೃಹದಲ್ಲಿ ಬಿಜೆಪಿ. ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್‌ರವರು ಮಾಲಾರ್ಪಣೆ ಮಾಡಿ ಚುನಾವಣೆಯಲ್ಲಿ ಜಯಶಾಲಿಯಾಗುವಂತೆ ಶುಭ ಹಾರೈಸಿದರು. ಚಿತ್ರದುರ್ಗ ಜಿಲ್ಲಾ ಬಿಜೆಪಿ. ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್, ವಕ್ತಾರ ನಾಗರಾಜ್‌ಬೇದ್ರೆ, ಹೊಳಲ್ಕೆರೆ ಮಂಡಲ ಪ್ರಧಾನ ಕಾರ್ಯದರ್ಶಿ ರೂಪ ಸುರೇಶ್, ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್ ಈ ಸಂದರ್ಭದಲ್ಲಿ ಹಾಜರಿದ್ದರು.

## ಬೈಕ್‌ಗೆ ಲಾರಿ ಡಿಕ್ಕಿ: ಇಬ್ಬರ ಸಾವು

**ದಾವಣಗೆರೆ:** ಹರಿಹರ ಬೈಪಾಸ್ ಹತ್ತಿರದ ರಾಷ್ಟ್ರೀಯ ಹೆದ್ದಾರಿ 48ರ ಹನಗವಾಡಿ ಸೇತುವೆ ಬಳಿ ಬೈಕ್‌ಗೆ ಹಿಂಬದಿಯಿಂದ ಟಿಪ್ಪರ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಯುವಕರು ಸ್ಥಳದಲ್ಲಿಯೇ ದುರ್ಮರಣಕ್ಕೀಡಾದ ಘಟನೆ ನಡೆದಿದೆ.

**ಪ್ರಮುಖ ಸುದ್ದಿ**

# ಪಟ್ಟಣದಲ್ಲಿ ಬ್ಯಾನರ್, ಬಂಟಿಂಗ್ಸ್ ತೆರವುಗೊಳಿಸಿದ ಪುರಸಭೆ

» **ಹೊಸದುರ್ಗ**



ಲೋಕಸಭಾ ಚುನಾವಣೆ ನೀತಿಸಂಹಿತೆ ಜಾರಿಯಾದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿ, ಹೊಸದುರ್ಗ ಹಾಗೂ ಯೋಜನಾ ನಿರ್ದೇಶಕರಾದ ಮಹೇಂದ್ರಕುಮಾರ್ ರವರು ಸಭೆಯನ್ನು ಪಟ್ಟಣದ ವ್ಯಾಪ್ತಿಯಲ್ಲಿ ಎಲ್ಲಾ ಮುಖ್ಯರಸ್ತೆಗಳಲ್ಲಿ ವಾರ್ಡ್‌ಗಳಲ್ಲಿ ಬ್ಯಾನರ್, ಬಂಟಿಂಗ್ಸ್ ಮತ್ತು ಹೋರ್ಡಿಂಗ್ಸ್ ಜೊತೆಗೆ ಗೋಡೆ ಬರಹಗಳನ್ನು ತೆರವುಗೊಳಿಸಲು ನೀಡಿರುವ ನಿರ್ದೇಶನದಂತೆ ಹೊಸದುರ್ಗ ಪಟ್ಟಣದ ನೋಡಲ್ ಅಧಿಕಾರಿ ಹಾಗೂ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ರವರು ಆರೋಗ್ಯ ನಿರೀಕ್ಷಕರು ಮತ್ತು ಕಂದಾಯಾಧಿಕಾರಿ ನೇತೃತ್ವದಲ್ಲಿ 2 ತಂಡಗಳನ್ನು ರಚಿಸಿ ಎಲ್ಲಾ ಬ್ಯಾನರ್, ಬಂಟಿಂಗ್ಸ್‌ಗಳನ್ನು ತೆರವುಗೊಳಿಸಿ ಗೋಡೆ ಬರಹಗಳಿಗೆ ಬಣ್ಣವನ್ನು ಬಳಿದು ಮುಚ್ಚಲಾಯಿತು.

ಪಟ್ಟಣದ 23 ವಾರ್ಡ್‌ಗಳಲ್ಲಿ ನೀತಿಸಂಹಿತೆ ಉಲ್ಲಂಘನೆಯಾಗುವಂತಹ ಬ್ಯಾನರ್, ಬಂಟಿಂಗ್ಸ್‌ಗಳು ಇರುವುದು ಕಂಡುಬಂದಲ್ಲಿ ಪುರಸಭೆಗೆ ತಿಳಿಸಲು ಮನವಿ ಮಾಡಿದ ಮುಖ್ಯಾಧಿಕಾರಿಗಳು ಅನುಮತಿ ಇಲ್ಲದೆ ಫ್ಲೆಕ್ಸ್, ಬ್ಯಾನರ್‌ಗಳನ್ನು ಮುದ್ರಿಸುವುದನ್ನು ಹಾಗೂ ಸಾರ್ವಜನಿಕ ಸ್ಥಳದಲ್ಲಿ ಕಟ್ಟುವುದನ್ನು ಸಂಪೂರ್ಣವಾಗಿ ತಡೆಹಿಡಿಯಲಾಗಿದ್ದು ಯಾವುದೇ ವ್ಯಕ್ತಿ ಉಲ್ಲಂಘಿಸಿ ಮುಂದುವರೆಸಿದ್ದಲ್ಲಿ ನಿರ್ದಾಕ್ಷ್ಯಣ್ಯವಾಗಿ ನೀತಿಸಂಹಿತೆ ಉಲ್ಲಂಘನೆಯಡಿ ಪ್ರಕರಣ ದಾಖಲಿಸಲಾಗುವುದು ಎಂಬ ವಿಚಾರವನ್ನು ತಿಳಿಸಿದರು.

ಚುನಾವಣಾ ಆಯೋಗದಿಂದ ಅ ಗಿಖಲುಖಐ ಆಪ್‌ನ್ನು ಅಭಿವೃದ್ಧಿ ಪಡಿಸಿದ್ದು, ನೀತಿಸಂಹಿತೆ ಉಲ್ಲಂಘನೆ ಚಟುವಟಿಕೆಗಳನ್ನು ಸಾರ್ವಜನಿಕರು ನೇರವಾಗಿ ದೂರುಗಳನ್ನು ಫೋಟೋ ಅಥವಾ ವೀಡಿಯೂ ಮೂಲಕ ಅಪ್‌ಲೋಡ್ ಮಾಡಲಾಗಿದೆ.

ಈ ಸಂಧರ್ಭದಲ್ಲಿ ಕಂದಾಯಾಧಿಕಾರಿಯಾದ ಯೋಗೇಶ್ ಬಿ.ಎಲ್,ಹಿರಿಯಆರೋಗ್ಯನಿರೀಕ್ಷಕರರಾದ ಬಸವರಾಜು, ಕರವಸೂಲಿಗಾರರಾದ ವಿನಯ್ ಎನ್ & ಮಂಜುನಾಥ, ದ್ವಿತೀಯ ದರ್ಜೆ ಸಹಾಯಕರಾದ ಲಿಂಗರಾಜು ಎಂ ಮತ್ತು ನೇಮಿಕಾಂತ್, ಕಂಪ್ಯೂಟರ್ ಆಪರೇಟರ್ ಆದ ವಿಕಾಸ್ ಹೆಚ್, ಪೌರಕಾರ್ಮಿಕರು ಹಾಗೂ ಇನ್ನಿತರೆ ಸಿಬ್ಬಂದಿಗಳು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ದಾವಣಗೆರೆ ಕ್ಷೇತ್ರಕ್ಕೆ ಡಿಸಿ ಚುನಾವಣಾಧಿಕಾರಿ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ಚುನಾವಣಾ ಅಧಿಸೂಚನೆಯು ಏಪ್ರಿಲ್ 12 ರಿಂದ ಜಾರಿಗೆ ಬರಲಿದ್ದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಚುನಾವಣಾಧಿಕಾರಿಯಾಗಿರುತ್ತಾರೆ. ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣ ಚುನಾವಣಾಧಿಕಾರಿಗಳ ಕಚೇರಿಯಾಗಿರುತ್ತದೆ. ನಾಮಪತ್ರಗಳ ಸ್ವೀಕೃತಿ ಇಲ್ಲಿಯೇ ನಡೆಯಲಿದೆ. ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ ಇವರು ಸಹಾಯಕ ಚುನಾವಣಾಧಿಕಾರಿಯಾಗಿರುವರು. ಉಳಿದಂತೆ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಚುನಾವಣಾಧಿಕಾರಿಗಳ ಹೆಸರು, ಸಂಪರ್ಕದ ವಿವರ; ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಇವರ ಮೊಬೈಲ್ ಸಂಖ್ಯೆ;7259700555, ಸಹಾಯಕ ಚುನಾವಣಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಅಫ್ರೀನ್ ಭಾನು ಎಸ್.ಬಳ್ಳಾರಿ ಇವರ ಮೊಬೈಲ್ ಸಂಖ್ಯೆ;7899155524, ಜಗಳೂರು ಕ್ಷೇತ್ರ; ಸಹಾಯಕ ಚುನಾವಣಾಧಿಕಾರಿ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಸಿದ್ದರಾಮ್ ಮರಿಹಾಳ್ 9901446664, ಹರಪನಹಳ್ಳಿ; ಹರಪನಹಳ್ಳಿ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ 9483966271, ಹರಿಹರ; ತಾಂತ್ರಿಕ ಸಹಾಯಕರು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಉಪನಿರ್ದೇಶಕರು ಭೂ ದಾಖಲೆಗಳ ಇಲಾಖೆ ಭಾವನ.ಬಿ 9480131892, ದಾವಣಗೆರೆ ಉತ್ತರ; ಜಿಲ್ಲಾ ನೊಂದಣಾಧಿಕಾರಿ ಇಸ್ಮಾಯಿಲ್ ಎಫ್. ದಂಬಾರಮಾತೂರ 9880122099, ದಾವಣಗೆರೆ ದಕ್ಷಿಣ; ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ 9902982111, ಮಾಯಕೊಂಡ; ದಾವಣಗೆರೆ ಉಪವಿಭಾಗಾಧಿಕಾರಿ ದುರ್ಗಶ್ರೀ. ಎನ್ 9449575975, ಚನ್ನಗಿರಿ; ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವಿಶೇಷ ಭೂ ಸ್ವಾಧೀನಾಧಿಕಾರಿ ರವಿ.ಎಸ್ 9731428990 ಹಾಗೂ ಹೊನ್ನಾಳಿ ವಿಧಾನಸಭಾ ಕ್ಷೇತ್ರಕ್ಕೆ ಸಹಾಯಕ ಚುನಾವಣಾಧಿಕಾರಿಯಾಗಿ ಹೊನ್ನಾಳಿ ಉಪವಿಭಾಗಾಧಿಕಾರಿ ಅಭಿಷೇಕ್.ವಿ ಇವರು ಕಾರ್ಯನಿರ್ವಹಿಸುತ್ತಿದ್ದು ಇವರ ಮೊಬೈಲ್ 8123915218 ಆಗಿರುತ್ತದೆ. ಸಾರ್ವಜನಿಕರು ಯಾವುದೇ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಹಾಗೂ ಚುನಾವಣಾ ಸಂಬಂಧಿ ಸಹಾಯ ಮತ್ತು ಮಾಹಿತಿಗಾಗಿ ಸಹಾಯಕ ಚುನಾವಣಾಧಿಕಾರಿಗಳನ್ನು ಅಥವಾ ಅವರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

### ಪುರಾಣ ಕಾಲದಿಂದಲೂ ಸಹಾ ಮಹಿಳೆ ಶೋಷಣೆಗೆ ಬಳಗಾಗುತ್ತಿದ್ದಾಳೆ



» ಚಿತ್ರದುರ್ಗ

ಪುರಾಣ ಕಾಲದಿಂದಲೂ ಸಹಾ ಮಹಿಳೆ ಶೋಷಣೆಗೆ ಬಳಗಾಗುತ್ತಿದ್ದಾಳೆ, ಅದು ಇಂದಿಗೂ ಸಹಾ ತಪ್ಪಿಲ್ಲ, ಈಗಲೂ ಸಹಾ ಮಹಿಳೆ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ ಎಂದು ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಶಶಿಕಲಾ ರವಿಶಂಕರ್ ಅಭೀಪ್ರಾಯಪಟ್ಟಿದ್ದಾರೆ.

ಜಿಲ್ಲಾ ಲಿಂಗಾಯತ ಶಿವಶಿಂಪಿ ಮಹಿಳಾ ಘಟಕದವತಿಯಿಂದಶಿವಶಿಂಪಿಮಹಿಳಾಸಂಭ್ರಮದ ಅಂಗವಾಗಿ ಸೋಮವಾರ ಸಂಜೆ ನಗರದ ಶ್ರೀ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಹಿಳೆ ಸಮರ್ಥ ಸಾಂಸ್ಕೃತಿಕ ರಾಯಭಾರಿ ಎಂಬ ವಿಷಯದ ಬಗ್ಗೆ ಮಾತನಾಡಿದ ಅವರು, ವೈಚಾರಿಕವಾಗಿ ಮಹಿಳೆ ಪ್ರಬುದ್ದತೆ ಪ್ರೌಢತ್ಯೆಯನ್ನು ಬೆಳಿಸಿಕೊಂಡು ಮಾತನಾಡುವ ಮಾತುಗಳು ಮಹಿಳೆಯರಿಗೆ ದಾರಿ ದೀಪವಾಗಲಿವೆ. ಇದಕ್ಕಿಂತ ಒಳ್ಳೆಯ ಕೆಲಸ ಬೇರೆ ಇಲ್ಲ ಎನ್ನಿಸುತ್ತದೆ. ಚಿತ್ರದುರ್ಗದ ಶಿವಶಿಂಪಿ ಮಹಿಳಾ ಘಟಕದಲ್ಲಿ ಶಿಕ್ಷಣ, ಆರ್ಥಿಕ, ಸಾಮಾಜಿಕವಾಗಿ ಯಾವುದೇ ಕೊರತೆ ಇಲ್ಲ ನೀವುಗಳ ಆಬಲೆಯರಲ್ಲ ಸಬಲೆಯರಾಗಿದ್ದೀರಾ, ಸಮಾಜ ಮುಖಿಯಾಗಿ ನಿಮ್ಮನ್ನು ನೀವು ತೊಡಗಿಸಿಕೊಳ್ಳುತ್ತಿರುವ ಉತ್ತಮವಾಗಿದೆ. ಇಲ್ಲಿ ಹಿರಿಯರು ಕಿರಿಯರು ಎನ್ನದೆ ಎಲ್ಲರು ಸೇರಿಕೊಂಡು ಸಮಾಜವನ್ನು ಮುನ್ನಡೆಸುವ ಕಾರ್ಯವನ್ನು ಮಾಡುತ್ತಿರುವುದು ತುಂಬಾ ಶ್ಲಾಘನೀಯವಾದದು ಎಂದರು.

ನಮ್ಮ ಪಕ್ಕದಲ್ಲಿಯೇ ಶೋಷಣೆಗೆ ಒಳಗಾದವರನ್ನು ಮರೆಯುವ ಹಾಗಿಲ್ಲ, ಮಹಿಳೆಯರು ಚನ್ನಾಗಿ ಇದ್ದಾರೆ ಎನ್ನುವುದು ಮಾತ್ರ ಆದರೆ ನಮ್ಮಲ್ಲಿ ಶೋಷಿತ ವರ್ಗ ನಮ್ಮಲ್ಲಿ ಇದೆ. ಮಹಿಳೆಯರ ಮೇಲೆ ಅನ್ಯಾಯವಾಗುತ್ತಿರುವುದ ಇಂದಿನ ಕಥೆಯಲ್ಲ, ಹಿಂದಿನಿಂದಲೂ ನಡೆದು ಕೊಂಡೆ ಬಂದಿದೆ. ಸೀತೆ, ಅಂಬೆ, ಮಾಧವಿ ಎಲ್ಲರು ಸಹಾ ಶೋಷಣೆಗೆ ಬಳಗಾದವರೇ ಮಹಿಳೆಯರು ತಮ್ಮಗೆ ಆದ ಅನ್ಯಾಯವನ್ನುಮೌನವಾಗಿಯೇಅನುಭವಿಸುತ್ತಾರೆ, ಮಹಿಳೆಯರಲ್ಲಿ ಪ್ರತಿಭಟನೆ ಎನ್ನುವುದು ವಿಶೇಷವಾದ ರೀತಿಯಲ್ಲಿ ವ್ಯಕ್ತವಾಗುತ್ತಿದೆ.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಸಲಹೆ

# ಕಾಲಕ್ಕೆ ತಕ್ಕಂತೆ ಜೀವನ ಶೈಲಿ ಬದಲಿಸಿಕೊಳ್ಳಿ

■ ಜನಾಶಯಪ್ರಭ ಚಿತ್ರದುರ್ಗ



ಬೇಸಿಗೆ ಕಾಲವಾದ್ದರಿಂದ ನಿರ್ಜಲೀಕರಣ ಉಂಟಾಗದಂತೆ ಶುದ್ಧ ಕುಡಿಯುವ ನೀರು ಹಾಗೂ ತಜ್ಞರು ಸೂಚಿಸಿದಂತೆ ಪೌಷ್ಟಿಕಾಂಶವಿರುವ ಆಹಾರ, ಹಣ್ಣುಗಳು, ತರಕಾರಿ ಕಾಲಮಾನಕ್ಕೆ ತಕ್ಕಂತೆ ಆಹಾರ ಪದಾರ್ಥಗಳ ಬಳಕೆ ಮಾಡಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾ ಎನ್.ಎಸ್.ಮಂಜುನಾಥ್ ಹೇಳಿದರು.

ತಾಲ್ಲೂಕಿನ ಗೊಡಬನಹಾಳ್ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಓಬೇನಹಳ್ಳಿ ಗ್ರಾಮದಲ್ಲಿ ಗ್ರಾಮಸ್ಥರಿಗೆ ಬೇಸಿಗೆ ಕಾಲದಲ್ಲಿ ಆರೋಗ್ಯ ಕಾಪಾಡುವ ಬಗ್ಗೆ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ಸಾರ್ವಜನಿಕ ಆರೋಗ್ಯ ಅರಿವು ಮೂಡಿಸಿ ಅವರು ಮಾತನಾಡಿದರು.

ಬೇಸಿಗೆ ಕಾಲವಾದ್ದರಿಂದ ತಾಪಮಾನ ಹೆಚ್ಚುತ್ತಿದ್ದು, ಕುರುಕಲು ತಿಂಡಿಗಳ ಕಡೆಗೆ ಗಮನ ಹರಿಸದೆ, ಜಾತ್ರೆ, ಹಬ್ಬ ಹರಿದಿನಗಳಲ್ಲಿ ಬೀದಿಯಲ್ಲಿ ಕೊಯ್ದಿಟ್ಟು ಮಾರುವ ಹಣ್ಣುಗಳನ್ನು ಸೇವಿಸಬಾರದು ಎಂದು ತಿಳಿಸಿದ ಅವರು, ದ್ರಾಕ್ಷಿ, ಕಿತ್ತಲೆ, ಸೇವಿಸುವುದು ಒಳಿತು, ಕಲ್ಲಂಗಡಿ ಹಣ್ಣಿನಲ್ಲಿ ನೀರು ಸಮೃದ್ಧವಾಗಿದ್ದು, ಚರ್ಮದ ಕೋಶಗಳನ್ನು ಸೂರ್ಯನ ಹಾನಿಯಿಂದ ರಕ್ಷಿಸಲು ಸಹಾಯ ಮಾಡುತ್ತದೆ ಮತ್ತು ದೇಹ ತಂಪಾಗಿರಲು ಸಹಕಾರಿಯಾಗುತ್ತದೆ. ವೈಯಕ್ತಿಕ ಸ್ವಚ್ಛತೆ ಜೊತೆಗೆ ಪರಿಸರ ಸ್ವಚ್ಛತೆ ಕಾಪಾಡಿಕೊಂಡು ಉತ್ತಮ ಆರೋಗ್ಯ ಹೊಂದಬಹುದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬೇಸಿಗೆ ಸಮಯದಲ್ಲಿ ಬಿಗಿಯಾದ ಉಡುಪುಗಳನ್ನು ಧರಿಸದೆ ತೆಳುವಾದ ಕಾಟನ್ ಬಟ್ಟೆ ಧರಿಸಬೇಕು. ಆಗಿಂದಾಗೆ ಕೈಗಳ ಸ್ವಚ್ಛತೆ ಕಾಪಾಡಿ, ತಣ್ಣೀರಿನ ಸ್ನಾನ ಮಾಡುವುದರ ಜೊತೆಗೆ ಬೆಳಗಿನ ಸಮಯದಲ್ಲಿ ಕೆಲಸ ಕಾರ್ಯಗಳ ಕಡೆ ಗಮನಹರಿಸಬೇಕು. ಮಧ್ಯಾಹ್ನ 12 ರಿಂದ 3 ಗಂಟೆವರೆಗೆ ಅನಾವಶ್ಯಕವಾಗಿ ಹೊರಗಡೆ ಓಡಾಡುವುದನ್ನು ತಪ್ಪಿಸುವುದು ಒಳಿತು, ಸುಡು ಬಿಸಿಲಿನಲ್ಲಿ ದೈಹಿಕ ಶ್ರಮದ ಕೆಲಸ ಮಾಡುತ್ತಿದ್ದರೆ ದೇಹದ ಉಷ್ಣಾಂಶ ಹೆಚ್ಚಾಗಿ ಸುಸ್ತು, ನೀರಡಿಕೆ, ಕಾಣಿಸಿಕೊಳ್ಳಬಹುದು, ಸೂರ್ಯನ ಶಾಖ ನೇರವಾಗಿ ಚರ್ಮದ ಮೇಲೆ ಬೀಳುವುದರಿಂದ ದೇಹದ ಬೆವರು ಹೆಚ್ಚಾಗಿ ದುರ್ವಾಸನೆ ಆಗಬಹುದು. ಚರ್ಮರೋಗಕ್ಕೆ ದಾರಿ ಮಾಡಿಕೊಡಬಹುದು. ಮತ್ತು ಜೀರ್ಣಕ್ರಿಯೆಗೆ ಬಾಳೆಹಣ್ಣು ಸೇವನೆ ಮಾಡುತ್ತಾ ಗರ್ಭಿಣಿ ಹೆಣ್ಣು ಮಕ್ಕಳು ಆಗಾಗ್ಗೆ ದ್ರವರೂಪದ ಆಹಾರ ಸೇವನೆ ಮಾಡಿ, ಮಧ್ಯಾಹ್ನ 2 ತಾಸು ತಪ್ಪದೇ ಮಲಗುವುದು ಒಳ್ಳೆಯದು ಎಂದರು.

ವೈದ್ಯರಲ್ಲಿ ಸಕಾಲಕ್ಕೆ ಪರೀಕ್ಷೆ ಮತ್ತು ಚಿಕಿತ್ಸೆ ಪಡೆದು ಮಾನಸಿಕ ನೆಮ್ಮದಿಯಿಂದ ಆರೋಗ್ಯ ಕಾಪಾಡಬೇಕು. "ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ" ಕಲುಷಿತ ನೀರು ಮತ್ತು ಕಲುಷಿತ ಆಹಾರದಿಂದ ಹರಡಬಹುದಾದ ರೋಗಗಳನ್ನು ತಡೆಯಲು ಸೂಕ್ತ ಮಾರ್ಗೋಪಾಯಗಳನ್ನು ಅನುಸರಿಸಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಮಧುಸೂದನ್, ಸಮುದಾಯ ಆರೋಗ್ಯ ಅಧಿಕಾರಿ ಉಸ್ನ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಜೆ.ರಾಜೇಶ್ವರಿ, ಆಶಾ ಕಾರ್ಯಕರ್ತೆ ಜಯಲಕ್ಷ್ಮಿ, ಅಂಗನವಾಡಿ ಕಾರ್ಯಕರ್ತೆ ತಿಮ್ಮಕ್ಕ ಸೇರಿದಂತೆ ಮತ್ತಿತರರು ಇದ್ದರು.

# ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ಹಕ್ಕಿದೆ

» ಚಿತ್ರದುರ್ಗ




ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ಹಕ್ಕಿದೆ. ಮಹಿಳೆಯರು ತಮ್ಮ ಹಕ್ಕುಗಳನ್ನು ಸರಿಯಾಗಿ ಚಲಾಯಿಸಬೇಕೆಂದು ಹಿರಿಯ ನ್ಯಾಯವಾದಿ ಬಿ.ಕೆ.ರಹಮತ್‌ವುಲ್ಲಾ ಕರೆ ನೀಡಿದರು.

ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಯುಕ್ತ ಸಂಘಟನೆ ಜಿಲ್ಲಾ ಸಮಿತಿಯಿಂದ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಗಂಡ ಸತ್ತರೆ ಹೆಂಡತಿ ಚಿತೆಗೆ ಹಾರುವ ಪದ್ದತಿಯಿತ್ತು. ಅದನ್ನು ರಾಜಾರಾಮ್ ಮೋಹನ್‌ರಾಯ್ ವಿರೋಧಿಸಿದರು. ವಿಧವಾ ಮಹಿಳೆ ಮರು ವಿವಾಹವಾಗುವ ಅವಕಾಶ ಕಾನೂನಿನಲ್ಲಿದೆ. ಆಸ್ತಿಯಲ್ಲೂ ಸಮಪಾಲು ಪಡೆಯಬಹುದು. ಮಹಿಳೆ ಮೇಲೆ ನಡೆಯುವ ದೌರ್ಜನ್ಯ, ದಬ್ಬಾಳಿಕೆ, ಹಲ್ಲೆ, ಅತ್ಯಾಚಾರ ಹೀಗೆ ಹತ್ತು ಹಲವಾರು ಸಮಸ್ಯೆಗಳಿಗೆ ಕಾನೂನಿನಲ್ಲಿ ರಕ್ಷಣೆಯಿದೆ ಎನ್ನುವ ಜಾಗೃತಿ ಮಹಿಳೆಯರಲ್ಲಿ ಮೂಡಬೇಕಿದೆ. ರಾಜಕೀಯದಲ್ಲಿ ಮೀಸಲಾತಿ ಸಿಕ್ಕಿದೆ. ಆದರೆ ಅಧಿಕಾರ ಚಲಾಯಿಸುವವರೆಲ್ಲಾ ಪುರುಷರೆ. ಚುನಾವಣಾ ಬಾಂಡ್‌ನಲ್ಲಿ ಸಾವಿರಾರು ಕೋಟಿ ರೂ.ಗಳ ಲೂಟಿಯಾಗಿದೆ. ಬೇಲಿಯೇ ಎದ್ದು ಹೊಲ ಮೇಯ್ದಿರೆ ಬೆಳೆಯನ್ನು ರಕ್ಷಿಸುವವರ್ಯಾರು ಎನ್ನುವಂತಾಗಿದೆ ಜನಸಾಮಾನ್ಯರ ಪಾಡು ಎಂದು ಬೇಸರ ವ್ಯಕ್ತಪಡಿಸಿದರು.

ಚುನಾವಣೆಯಲ್ಲಿ ಆಸೆ ಆಮಿಷಗಳಿಗೆ ಬಲಿಯಾಗಬೇಡಿ. ಅಮೂಲ್ಯವಾದ ಮತವನ್ನು ಚಲಾಯಿಸಿ ಯೋಗ್ಯರನ್ನು ಆಯ್ಕೆ ಮಾಡಿ. ಕೊಳಗೇರಿ ನಿವಾಸಿಗಳು ಬಡತನವನ್ನು ಮುಂದಿಟ್ಟುಕೊಂಡು ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಬೇಡಿ. ಕಡ್ಡಾಯವಾಗಿ ಶಿಕ್ಷಣ ಕೊಡಿಸಿ. ಶಿಕ್ಷಣದಿಂದ ಮಾತ್ರ ಜೀವನದಲ್ಲಿ ಬದಲಾವಣೆ ಕಂಡುಕೊಳ್ಳಬಹುದು ಎಂದರು.

ನ್ಯಾಯವಾದಿ ದಿಲ್‌ಶಾದ್ ಉನ್ನಿಸಾ ಮಾತನಾಡಿ ಹೆಣ್ಣು-ಗಂಡೆಂಬ ತಾರತಮ್ಯ ಹಿಂದಿನಿಂದಲೂ ಇದೆ. ಈಗಲು ಇದೆ. ಆದರೆ ಸಂವಿಧಾನದಲ್ಲಿ ಹೆಣ್ಣು-ಗಂಡೆಂಬ ಬೇಧವಿಲ್ಲ. ಎಲ್ಲರಿಗೂ ಸಮಾನವಾದ ಅವಕಾಶ ಕಲ್ಪಿಸಲಾಗಿದೆ. ಪ್ರಯೋಜನ ಪಡೆದುಕೊಳ್ಳಬೇಕಷ್ಟೆ. ಹೆಣ್ಣು ಅಡುಗೆ ಮನೆಗಷ್ಟೆ ಸೀಮಿತವಾಗಬಾರದು. ಸಮಾನತೆ, ಸ್ವಾತಂತ್ರ್ಯ ಎನ್ನುವುದನ್ನು ಮತ್ತೊಬ್ಬರಿಂದ ಕೇಳಿ ಪಡೆಯುವುದಲ್ಲ. ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಮಹಿಳೆ ಸಮಾಜದಲ್ಲಿ ಮುನ್ನುಗ್ಗಿದಾಗ ಮಾತ್ರ ಮುಖ್ಯವಾಹಿನಿಗೆ ಬರಬಹುದು ಎಂದು ಹೇಳಿದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಿವರಶ್ಮಿ ಅಕ್ಕ, ಕರ್ನಾಟಕ ಶಾಂತಿ ಮತ್ತು ಸೌಹಾರ್ಧ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್, ಮಹಿಳಾ ಸೇವಾ ಸಮಾಜದ ಉಪಾಧ್ಯಕ್ಷೆ ಮೋಕ್ಷರುದ್ರಸ್ವಾಮಿ, ಓ.ನರಸಿಂಹಮೂರ್ತಿ, ರಂಗಸ್ವಾಮಿ, ಕೆ.ಕೆ. ಎನ್.ಎಸ್.ಎಸ್.ಜಿಲ್ಲಾ ಸಮಿತಿ ಅಧ್ಯಕ್ಷ ಗಣೇಶ್ ವೇದಿಕೆಯಲ್ಲಿದ್ದರು.

# ನಾನೊಬ್ಬ ಸ್ಟ್ರಾಂಗ್ ಸಿಎಂ, ನಿಮ್ಮ ಹಾಗೆ ವೀಕ್ ಪಿಎಂ ಅಲ್ಲ

**ಬಂಡುಕೋರ ನಾಯಕ ಈಶ್ವರಪ್ಪ ವಿರುದ್ಧ ಕ್ರಮಕೈಗೊಳ್ಳಲಾಗದ ನೀವು "ವೀಕ್ ಪಿಎಂ" ಅಲ್ಲದೆ ಮತ್ತೇನು?: ಸಿಎಂ**

» ಬೆಂಗಳೂರು



ಸನ್ಮಾನ್ಯ ಪ್ರಧಾನಿ ನರೇಂದ್ರ ಮೋದಿಯವರೇ, ಕಾಂಗ್ರೆಸ್ ಪಕ್ಷದಲ್ಲಿ ಸೂಪರ್ ಸಿಎಂ, ಶ್ಯಾಡೋ ಸಿಎಂ ಗಳಿದ್ದಾರೆ ಎಂದು ಶಿವಮೊಗ್ಗದ ನಿಮ್ಮ ಪಕ್ಷದ ಸಭೆಯಲ್ಲಿ ನೀವು ಗೇಲಿ ಮಾಡಿದ್ದೀರಿ! ನಮ್ಮಲ್ಲಿ ಸೂಪರೂ ಇಲ್ಲ, ಶ್ಯಾಡೋನೂ ಇಲ್ಲ, ಇರುವುದು ಒಬ್ಬರೇ ಸಿಎಂ ಅದು "ಸ್ಟಾಂಗ್ ಸಿಎಂ", ನಿಮ್ಮ ಹಾಗೆ ನಾನು "ವೀಕ್ ಪಿಎಂ" ಅಲ್ಲ. ಮೋದಿಯವರೇ ನಿಮ್ಮನ್ನು ನೀವು 56 ಇಂಚಿನ ಎದೆಯುಳ್ಳವನು ಎಂದು ಬಣ್ಣಿಸಿಕೊಳ್ಳುತ್ತೀರಿ, ನಿಮ್ಮ ಅಭಿಮಾನಿಗಳು ನಿಮ್ಮನ್ನು ವಿಶ್ವಗುರು ಎಂದು ಕೊಂಡಾಡುತ್ತಾರೆ. ಆದರೆ ನೀವೊಬ್ಬ "ವೀಕ್ ಪಿಎಂ" ಎಂದು ಮತ್ತೆ ಮತ್ತೆ ತೋರಿಸಿಕೊಡುತ್ತಿದ್ದೀರಿ. ಬಿ.ಎಸ್ ಯಡಿಯೂರಪ್ಪನವರು ಒಂದು ಕಾಲದಲ್ಲಿ ನಿಮ್ಮ ನಾಯಕತ್ವದ ವಿರುದ್ಧವೇ ಬಂಡಾಯ ಎದ್ದವರು, ನಿಮ್ಮನ್ನು ಹೀನಾಯವಾಗಿ ನಿಂದಿಸಿದವರು. ಅಂತಹವರ ಕಾಲಿಗೆ ಬಿದ್ದು ಮತ್ತೆ ಪಕ್ಷಕ್ಕೆ ಕರೆತಂದು ಮೆರವಣಿಗೆ ಮಾಡುವ ಮೂಲಕ ನೀವೊಬ್ಬ "ವೀಕ್ ಪಿಎಂ" ಎಂದು ನೀವೇ ತೋರಿಸಿಕೊಟ್ಟಂತಾಗಲಿಲ್ಲವೇ?

ಕರ್ನಾಟಕದಲ್ಲಿ ನಿಮ್ಮ ನಾಯಕತ್ವದ ವಿರುದ್ಧ ಅರ್ಧ ಡಜನ್ ನಾಯಕರು ಬಂಡೆದಿದ್ದಾರೆ. ಟಿಕೆಟ್ ಪಡೆಯಲು ಅಸಮರ್ಥರಾದ ನಿಮ್ಮ ಪಕ್ಷದ ನಾಯಕರು ಹಾದಿ ಬೀದಿಲಿ ಹೊಡೆದಾಡಿಕೊಳ್ಳುತ್ತಿದ್ದಾರೆ, ಪರಸ್ಪರ ಕೆಸರೆರಚಾಟ ನಡೆಸುತ್ತಿದ್ದಾರೆ. ನಿಮ್ಮ ಯಾವ ಮನವಿಗೂ ಅವರು ಕಿವಿಕೊಟ್ಟಿಲ್ಲ. ಇವರಲ್ಲಿ ಕೆಲವರು ನಮ್ಮನ್ನೂ ಸಂಪರ್ಕಿಸುತ್ತಿದ್ದಾರೆ. ಶಿಸ್ತಿನ ಪಕ್ಷದಲ್ಲಿ ಇದೆಂತಹ ಅಶಿಸ್ತಿನ ತಾಂಡವ. ಇದಕ್ಕೆಲ್ಲ ಕಾರಣ ನೀವೊಬ್ಬ "ವೀಕ್ ಪಿಎಂ" ಆಗಿರುವುದಲ್ಲವೇ?

ಶಿವಮೊಗ್ಗದಲ್ಲಿ ನೀವು ಪಕ್ಷದ ಪ್ರಚಾರ ಸಭೆ ನಡೆಸುತ್ತಿದ್ದಾಗ ಬಂಡುಕೋರ ನಾಯಕ ಈಶ್ವರಪ್ಪನವರು ಕೂಗಳತೆ ದೂರದ ತಮ್ಮ ಮನೆಯಲ್ಲಿದ್ದರೂ ಕ್ಯಾರೇ ಅನ್ನದೆ ಸಭೆಗೆ ಗೈರು ಹಾಜರಾಗಿದ್ದರು. ಇಷ್ಟು ಮಾತ್ರವಲ್ಲ ನಿರಂತರವಾಗಿ ಬಿಜೆಪಿ ನಾಯಕತ್ವದ ವಿರುದ್ಧ ಕಿಡಿಕಾರುತ್ತಿದ್ದರು. ಅವರ ವಿರುದ್ಧ ಕ್ರಮಕೈಗೊಳ್ಳಲಾಗದ ನೀವು "ವೀಕ್ ಪಿಎಂ" ಅಲ್ಲದೆ ಮತ್ತೇನು?ನಮ್ಮದು ಆಂತರಿಕ ಪ್ರಜಾಪ್ರಭುತ್ವ ಇರುವ ಪಕ್ಷ, ಮುಖ್ಯಮಂತ್ರಿ ಸ್ಥಾನಕ್ಕೆ ಅರ್ಹರಾದವರು ಹಲವು ಮಂದಿ ಇದ್ದಾರೆ. ನಿಮ್ಮ ಪಕ್ಷದ ಕತೆ ಏನು? ವಿಶ್ವದಲ್ಲಿಯೇ ಅತ್ಯಂತ ಹೆಚ್ಚು ಸದಸ್ಯರನ್ನು ಹೊಂದಿದ್ದೇವೆ ಎಂದು ಕೊಚ್ಚಿಕೊಳ್ಳುತ್ತಿರುವ ನಿಮ್ಮ ಪಕ್ಷದಲ್ಲಿ ಪಿಎಂ ಆಗುವ ಅರ್ಹತೆ ಇರುವ ಒಬ್ಬ ನಾಯಕನೂ ಇಲ್ಲವಲ್ಲಾ? ಅಂತಹ ನಾಯಕರೇ ಇಲ್ವಾ? ಕುರ್ಚಿ ಕಳೆದುಕೊಳ್ಳುವ ಭಯದಿಂದ ಅಂತಹ ನಾಯಕರನ್ನು ಬೆಳೆಯಲು ನೀವೇ ಬಿಡುತ್ತಿಲ್ವಾ?

# ಮೀನುಗಾರಿಕೆ ಸಲಕರಣೆ ಕಿಟ್‌ಗಾಗಿ ಸಹಾಯಧನ

**ತುಮಕೂರು:** ಮೀನುಗಾರಿಕೆ ಇಲಾಖೆಯು ಶೇ.100ರ ಸಹಾಯಧನದಲ್ಲಿ ಮೀನುಗಾರಿಕೆ ಸಲಕರಣೆ ಕಿಟ್ ಸೌಲಭ್ಯಕ್ಕಾಗಿ ಮೀನುಗಾರಿಕೆಯಲ್ಲಿ ತೊಡಗಿರುವ ಜಿಲ್ಲೆಯ ತಿಪಟೂರು, ಗುಬ್ಬಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗಡಿ ಬಾಧಿತ ಗ್ರಾಮಗಳ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತ ವ್ಯಕ್ತಿ/ಸಂಘ ಸಂಸ್ಥೆಗಳು ತಿಪಟೂರು/ಗುಬ್ಬಿ/ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಏಪ್ರಿಲ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗೋಡೇಕೆರೆ, ಗೋಡೇಕೆರೆ ಹಟ್ಟಿ, ರಂಗನಾಥಪುರ, ಬಾಣದೇವರಹಟ್ಟಿ, ಹೊನ್ನೇಬಾಗಿ ಕ್ಯಾಂಪ್, ಹೊಸಹಳ್ಳಿ, ಬಗ್ಗನಹಳ್ಳಿ, ನಡುವನಹಳ್ಳಿ, ನಾರಸೀಹಳ್ಳಿ, ಚಿಕ್ಕರಾಂಪುರ, ಕಾತ್ರಿಕೆಹಾಳ್, ತೀರ್ಥಪುರ, ಜೋಗಿಹಳ್ಳಿ, ಗುರುವಾಪುರ, ಅಜ್ಜೀಗುಡ್ಡೆ, ರಾಮನಹಳ್ಳಿ, ಜೆ.ಸಿ.ಪುರ, ಕಾಡೇನಹಳ್ಳಿ, ಚಿಕ್ಕನಾಯಕನಹಳ್ಳಿ, ಸಾವಿಗೆಹಳ್ಳಿ, ಆಲದಕಟ್ಟೆ, ಬಳ್ಳೇಕಟ್ಟೆ, ಬೈಲಪ್ಪನಮಠ, ಅಂಕಲಬಾವಿ, ಅವಳಗೆರೆ, ಚಿಕ್ಕಬಿದರೆ, ದೊಡ್ಡಬಿದರೆ, ಪೋಚಕಟ್ಟೆ, ಹುಳಿಯಾರು, ಬಾವನಹಳ್ಳಿ; ಗುಬ್ಬಿ ತಾಲ್ಲೂಕಿನ ಕಂಚಗಾನಹಳ್ಳಿ, ಬಡವನಪಾಳ್ಯ, ಹೊನ್ನಕಂಬಿಹಟ್ಟಿ, ಎನ್. ಹೊಸಹಳ್ಳಿ, ದೇವರಹಟ್ಟಿ, ದೊಡ್ಡಗುಣಿ, ಗುಡ್ಡದ ಹೋಬಳಾಪುರ, ಗುಡ್ಡದ ಹಟ್ಟಿ, ಕರಡಿಕಲ್ಲು, ಯಲ್ಲಾಪುರ, ವಿರೂಪಾಕ್ಷಿ ಪುರ, ಬೊಮ್ಮರಸನಹಳ್ಳಿ, ಹೊಸಹಟ್ಟಿ, ಬಸವನಗುಡಿ; ತಿಪಟೂರು ತಾಲ್ಲೂಕಿನ ಅಯ್ಯನಪಾಳ್ಯ, ಕಾಮಗೊಂಡನಹಳ್ಳಿ, ಯಗಚಿಕಟ್ಟೆ, ಬಿಳಿಗೆರೆ, ಕೆಬಿ ಕ್ರಾಸ್, ಹಟ್ನ, ತರಬೇನಹಳ್ಳಿ, ಹಾಲುಗೋಣ, ಹರೇನಹಳ್ಳಿ ಗ್ರಾಮದ ವ್ಯಕ್ತಿ/ಸಂಘ ಸಂಸ್ಥೆಗಳು ಮೀನುಗಾರಿಕೆ ಸಲಕರಣೆ ಕಿಟ್‌ಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

## ಪ್ರಮುಖ ಸುದ್ದಿ

# ಬಸವಾಪುರದ ಮಾವಿನಹಳ್ಳಿ ಬಸವೇಶ್ವರ ಸ್ವಾಮಿ ರಥೋತ್ಸವ

» ಚಿತ್ರದುರ್ಗ



ತಾಲ್ಲೂಕಿನ ಹಿರೇಗುಂಟನೂರು ಹೋಬಳಿಯ ಭೀಮಸಮುದ್ರ ಮಜುರೆ ಬಸವಾಪುರದ ಶ್ರೀ ಮಾವಿನಹಳ್ಳಿ ಬಸವೇಶ್ವರ ಸ್ವಾಮಿಯ ರಥೋತ್ಸವ ಕಾರ್ಯಕ್ರಮವೂ ನೆರೆದಿದ್ದ ಅಸಂಖ್ಯಾಂತ ಭಕ್ತಾಧಿಗಳ ಸಮ್ಮುಖದಲ್ಲಿ ನಡೆಯಿತು.

ಮಾ.15 ರಂದು ಸ್ವಾಮಿಗೆ ರುದ್ರಾಭಿಷೇಕ, ಕಂಕಣಧಾರಣೆ, ಪಲ್ಲಕ್ಕಿ ಉತ್ಸವ ಧ್ವಜಾರೋಹಣ ಕಾರ್ಯಕ್ರಮವೂ ನೆಲ್ಲಿಕಟ್ಟೆ ಗ್ರಾಮಸ್ಥರಿಂದ; ಮಾ. 16ರಂದು ಅಶ್ವೋತ್ಸವ ಬೆಟ್ಟದನಾಗೇನಹಳ್ಳಿ ಗ್ರಾಮಸ್ಥರಿಂದ, ಮಾ. 17 ರಂದು ವೃಷಭೋತ್ಸವ ಬಸವಾಪುರ ಗ್ರಾಮಸ್ಥರಿಂದ, ಫೆ.18 ರಂದು ಬೆಳ್ಳಿಗೆ 6 ಗಂಟೆಗೆ ಹೂವಿನ ಉತ್ಸವ ಸೇವೆ, ಸ್ವಾಮಿಗೆ ಗಜೋತ್ಸವ ಹಾಗೂ 10ಗಂಟೆಗೆ ಕೆಂಡದಾರ್ಚನೆ ಸೇವೆಯನ್ನು ತಿರುಮಲಾಪುರ ಹಾಗೂ ಲಿಂಗದಹಳ್ಳಿ ಗ್ರಾಮಸ್ಥರಿಂದ ನೇರವೇರಿತು.

ಇಂದು ಬೆಳಿಗ್ಗೆ ಸ್ವಾಮಿಗೆ ಎಂದಿನಂತೆ ರುದ್ರಾಭೀಷೇಕ, ಸಹಸ್ರ ಬಿಲ್ವಾರ್ಚನೆ ಕಾರ್ಯಕ್ರಮ ನಡೆದಿದ್ದು, ಸಂಜೆ 4 ಗಂಟೆಗೆ ಸ್ವಾಮಿಗೆ ಹೂವಿನ ಪಲ್ಲಕ್ಕಿ ಉತ್ಸವದ ನಂತರ ಶ್ರೀ ಸ್ವಾಮಿಯ ರಥೋತ್ಸವ ಕಾರ್ಯಕ್ರಮವನ್ನು ನಡೆಸಲಾಯಿತು.

ರಥೋತ್ಸವದ ಅಂಗವಾಗಿ ರಾಜ್ಯದ ವಿವಿಧೆಗಳಿಂದ ಆಗಮಿಸಿದ್ದ ಭಕ್ತ ಸಮೂಹ ಸಕ್ರಿಯ ಬಾಗವಹಿಸಿ ರಥವನ್ನು ಭಕ್ತಿಯಿಂದ ಎಳೆಯುವುದರ ಮೂಲಕ ಸ್ವಾಮಿಯ ಕೃಪೆಗೆ ಪಾತ್ರರಾದರು. ಜಾತ್ರೆಯ ಅಂಗವಾಗಿ ದೇವಾಲಯದ ಆವರಣದ ಸುತ್ತಾ-ಮುತ್ತಲ್ಲಿನ ಪ್ರದೇಶದಲ್ಲಿ ವಿವಿಧ ರೀತಿಯ ಅಂಗಡಿಗಳನ್ನು ನಿರ್ಮಾಣ ಮಾಡಲಾಗಿತ್ತು ಹೊಸದಾಗಿ ಮದುವೆಯಾದ ಜೋಡಿಗಳು ರಥದ ಕಲಶವನ್ನು ನೋಡಬೇಕು ಎನ್ನುವ ಪ್ರತೀತಿ ಇರುವುದರಿಂದ ಹಲವಾರು ಜೋಡಿಗಳೊಂದಿಗೆ ಮಕ್ಕಳು, ವಯೋವೃದ್ಧರು, ಮಧ್ಯವಯಸ್ಕನವರು, ಹೆಂಗಸರು ರಥೋತ್ಸವದಲ್ಲಿ ಭಾಗವಹಿಸಿದ್ದರು.

ಸಂಜೆಯಾಗುತ್ತಿದ್ದಯೇ ಸ್ವಾಮಿಯನ್ನು ಹೂವಿನ ಪಲ್ಲಕ್ಕಿಯಲ್ಲಿ ಕುಳ್ಳರಿಸಿ ದೇವಾಲಯದ ಆವರಣದಲ್ಲಿ ಮೂರು ಸುತ್ತು ಹಾಕುವುದರ ಮೂಲಕ ನಂತರ ರಥದಲ್ಲಿ ಕುಳ್ಳರಿಸಿದಾಗ ಆಗಮಿಸಿದ್ದ ಭಕ್ತಾಧಿಗಳು ರಥವನ್ನು ಎಳೆಯುವುದರ ಮೂಲಕ ಸ್ವಾಮಿಯ ರಥೋತ್ಸವವನ್ನು ಶ್ರದ್ಧಾ ಭಕ್ತಿಯಿಂದ ನೇರವೇರಿಸಿದರು. ಈ ಸಂದರ್ಭದಲ್ಲಿ ಭಕ್ತಾಧಿಗಳಿಂದ ಮಾವಿನಹಳ್ಳಿ ಬಸವೇಶ್ವರ ಮಹಾರಾಜ್ ಕೀ ಜೈ ಎಂಬ ಘೋಷಣೆಗಳು ಕೇಳಿ ಬಂದವು. ಈ ಸಂದರ್ಭದಲ್ಲಿ ಸ್ವಾಮಿಯ ಬಾವುಟ, ವಿವಿಧ ರೀತಿಯ ಹೂ ಮಾಲೆಗಳು, ಚೌಡಮ್ಮರ ಹಾರವನ್ನು ಮಹಿಳೆಯರಿಗಾಗಿ ಹರಾಜು ಹಾಕಲಾಯಿತು. ಸ್ವಾಮಿಯ ರಥೋತ್ಸವದ ಅಂಗವಾಗಿ ಮಾ.20ರ ಸಂಜೆ 5ಕ್ಕೆ ಕಂಕಣ ವಿಸರ್ಜನೆ ಹಾಗೂ ಮಹಾ ಮಹಾಮಂಗಳಾರತಿಯೊಂದಿಗೆ ಸ್ವಾಮಿಯ ಈ ವರ್ಷದ ರಥೋತ್ಸವದ ಸೇವಾ ಕಾರ್ಯಕ್ರಮ ಮುಕ್ತಾಯವಾಗಲಿದೆ.

ಈ ಸಂದರ್ಭದಲ್ಲಿ ಮಾವಿನಹಳ್ಳಿ ಬಸವೇಶ್ವರ ಸ್ವಾಮಿ ಟ್ರಸ್ಟ್‌ನ ಉಪಾಧ್ಯಕ್ಷರಾದ ಬಿ.ಎಸ್.ವಿಶ್ವನಾಥ್‌ಪ್ಪ ಪಟೇಲ್ ಎಸ್.ಬಿ. ಪುಟ್ಟಪ್ಪ ಸ್ಥಾನಿಕ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರಪ್ಪ, ಕಾರ್ಯದರ್ಶಿ ಸಿದ್ದೇಶ್ ಸ್ಥಾನಿಕ್, ಸಹ ಕಾರ್ಯದರ್ಶಿ ಟಿ.ಎಸ್.ರುದ್ರಮುನಿಯಪ್ಪ, ಬಸವರಾಜ್ ಸ್ಥಾನಿಕ್, ಅರ್ಚಕರಾದ ಜಯ್ಯಣ್ಣ ಸ್ಥಾನಿಕ್, ಆನಂದ ಸ್ಥಾನಿಕ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T